ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ
ಕನ್ನಡದಿನ ಪತ್ರಿಕೆ
ರಾಯಚೂರನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 169 | ದಿನಾಂಕ : 19-04-2026 Date : 19-04-2026 | ರವಿವಾರ Sunday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ರಾಯಚೂರಿನಲ್ಲಿ 44.2 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲು

**ರಾಯಚೂರು,ಏ.19**-ಬಿಸಿಲೂರು ಎಂದು ಕರೆಯುವ ರಾಯಚೂರು ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಗರಿಷ್ಠ ಬಿಸಿಲಿನ ತಾಪಮಾನ ದಾಖಲಾಗುವ ಮೂಲಕ ಜನರನ್ನು ಹೈರಾಣಾಗಿಸಿದೆ.

ಬೇಸಿಗೆ ಆರಂಭವಾಗುತ್ತಿದ್ದಂತೆಯೇ ರಾಜ್ಯದಲ್ಲಿ ಬಿಸಿಲಿನ ತಾಪಮಾನ ಏರಿಕೆಯಾಗುತ್ತಿದ್ದು, ಜಿಲ್ಲೆ ಶನಿವಾರ ರಾಜ್ಯದಲ್ಲೇ ಅತಿಹೆಚ್ಚಿನ ಉಷ್ಣಾಂಶ ದಾಖಲಿಸಿ ಗಮನ ಸೆಳೆದಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರ, ಬಿಡುಗಡೆ ಮಾಡಿದ ವರದಿ ಪ್ರಕಾರ, ಜಿಲ್ಲೆಯಲ್ಲಿ ಗರಿಷ್ಠ 44.2 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ರಾಯಚೂರು ತಾಲೂಕಿನ ದೇವಸೂಗೂರು ಗ್ರಾಮದಲ್ಲಿ 44.2 ಡಿಗ್ರಿ ಹಾಗೂ ಕಲಮಲಾ ಗ್ರಾಮದಲ್ಲಿ 44 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದು, ಇದು ರಾಜ್ಯದಲ್ಲೇ ಅತಿಹೆಚ್ಚು ಎಂದು ತಿಳಿದುಬಂದಿದೆ.

ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಕನಿಷ್ಠ 42 ರಿಂದ ಗರಿಷ್ಠ 44.2 ಡಿಗ್ರಿವರೆಗೆ ಉಷ್ಣಾಂಶ ಕಂಡುಬಂದಿದ್ದು, ಬಿಸಿಲಿನ ತೀವ್ರತೆ ದಿನೇ ದಿನೆ ಹೆಚ್ಚುತ್ತಿದೆ. ಕಳೆದ ಕೆಲವು ದಿನಗಳಿಂದಲೇ 40 ಡಿಗ್ರಿ ಸೆಲ್ಸಿಯಸ್ ಮೀರಿದ ➘4

## ಮಹಿಳಾ ಮೀಸಲಾತಿ ಮಸೂದೆ ಸೋಲು ಕೇಂದ್ರದ ತುಘ್ಲಕ್ ಆಡಳಿತಕ್ಕೆ ಹೊಡೆತ: ಡಾ. ರಝಾಕ್ ಉಸ್ತಾದ್

**ರಾಯಚೂರು,ಏ.19**-ಕೇಂದ್ರ ಸರ್ಕಾರ ಮಹಿಳಾ ಮೀಸಲಾತಿ ಹೆಸರಿನಲ್ಲಿ ಮಂಡಿಸಿದ ಮೂರು ಮಸೂದೆಗಳಿಗೆ ಅಗತ್ಯ ಬಹುಮತ ಸಿಗದೆ ಸೋತಿರುವುದು, ಸರ್ಕಾರದ ನಿರಂಕುಶ ಆಡಳಿತಕ್ಕೆ ಬಂದಿರುವ ಹೊಡೆತ ಎಂದು ಕೆಪಿಸಿಸಿ ಮಾಧ್ಯಮ ವಿಭಾಗದ ರಾಜ್ಯ ವಕ್ತಾರ ಡಾ. ರಝಾಕ್ ಉಸ್ತಾದ್ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಯಾವುದೇ ಸಂವಿಧಾನ ತಿದ್ದುಪಡಿಗೆ ಮೂರನೇ ಎರಡರಷ್ಟು ಬಹುಮತ ಅಗತ್ಯವಿದೆ ಎಂಬುದು ಗೊತ್ತಿದ್ದರೂ, ವಿರೋಧ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೇ ಮಸೂದೆ ಮಂಡಿಸಿರುವುದು ಸರ್ಕಾರದ ಬದ್ಧತೆಯ ಕೊರತೆಯನ್ನು ತೋರಿಸುತ್ತದೆ ಎಂದರು. ➘4

## ಬಾವಿಯಲ್ಲಿ ವ್ಯಕ್ತಿ ಶವ ಪತ್ತೆ

**ರಾಯಚೂರು,ಏ.19**-ಬಾವಿಯೊಂದರಲ್ಲಿ ವ್ಯಕ್ತಿಯ ಮೃತಪಟ್ಟಿರುವ ಶವ ಪತ್ತೆಯಾಗಿದ್ದ ಘಟನೆ ತಾಲೂಕಿನ ಮನ್ಸಲಾಪೂರ ಗ್ರಾಮದಲ್ಲಿ ನಡೆದಿದೆ.

ಮನ್ಸಲಾಪೂರ ಗ್ರಾಮದ ಹೊರವಲಯದಲ್ಲಿನ ಬಾವಿಯಲ್ಲಿ ಶವಪತ್ತೆಯಾಗಿದ್ದು ಮೃತಪಟ್ಟಿರುವ ವ್ಯಕ್ತಿ ಚಂದಪ್ಪ (32) ವರ್ಷ ಬಳಿಚಕ್ರ ಎಂದು ಗುರುತಿಸಲಾಗಿದೆ.

ಕಳೆದ ರಾತ್ರಿ ಮೃತ ವ್ಯಕ್ತಿ ಬಾವಿಯಲ್ಲಿ ಬಿದ್ದಿರುವ ಮಾಹಿತಿ ಲಭ್ಯವಾಗಿದ್ದು ಹುಡುಕಾಟ ನಡೆಸಲಾಗಿದೆ, ಶವ ದೊರೆಯ ಕಾರಣ ಇಂದು ಬೆಳಗ್ಗೆ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದು ಸ್ಥಳಕ್ಕಾಗಮಿಸಿದ ಅಗಿ ್ನಶಾಮಕ ದಳ ಸಿಬ್ಬಂದಿಗಳು ಹುಟುಕಾಟ ನಡೆಸಿ ಮೃತದೇಹವನ್ನು ಹೊರಕ್ಕೆ ತೆಗೆಯಲಾಗಿದೆ.

ಮೃತಪಟ್ಟಿರುವ ವ್ಯಕ್ತಿ ಬಳಿಚಕ್ರ ಗ್ರಾಮದವರೆಂದು ತಿಳಿದು ಬಂದಿದ್ದು, ಮನ್ಸಲಾಪೂರ ಗ್ರಾಮದ ಅಕ್ಕನ ಮನೆಗೆ ಬಂದಿದ್ದರೆಂದು ಮಾಹಿತಿ ತಿಳಿದು ಬಂದಿದೆ. ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಬಿಸಿಲಿನ ಶಾಖಾಘಾತದ ಮುಂಜಾಗ್ರತೆ

## ಕುಡಿಯುವ ನೀರಿನ ಮೂಲಗಳ ಪರೀಕ್ಷೆಗೆ ಆದ್ಯತೆ ನೀಡಿ: ಈಶ್ವರ ಕುಮಾರ್ ಕಾಂದೂ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು:ಏ:18**-ಪ್ರಸ್ತುತ ಹವಮಾನ ಬದಲಾವಣೆ ಹಾಗೂ ಪ್ರಖರ ಬಿಸಿಲಿನ ತಾಪಮಾನದಿಂದ ಪ್ರತಿಯೊಬ್ಬರ ಸುರಕ್ಷತೆಗಾಗಿ ನಿರಂತರ ಜಾಗೃತಿ, ಮತ್ತು ಎಲ್ಲ ಕುಡಿಯುವ ನೀರಿನ ಮೂಲ ಗಳು ಕುಡಿಯಲು ಯೋಗ್ಯವಾಗಿವೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಆಯಾ ಗ್ರಾಮ ಪಂಚಾಯತ ಹಾಗೂ ಸ್ಥಳೀಯ ಸಂಸ್ಥೆಗಳೊಂದಿಗೆ ಸಮನ್ವಯ ಕೈಗೊಳ್ಳಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕುಮಾರ್ ಕಾಂದೂ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ತುಂಗಾ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಪ್ರಸ್ತುತ 40 ಡಿಗ್ರಿಗಿಂತ ಹೆಚ್ಚು ಇರುವ ತಾಪಮಾನ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಾಗುವ ಸಾಧ್ಯತೆ ಇದ್ದು, ನವಜಾತ ಶಿಶು ಹಾಗೂ ಚಿಕ್ಕ ಮಕ್ಕಳು ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ದರು, ಧೀರ್ಘಕಾಲದಿಂದ ಖಾಯಿಲೆಗಳಿಂದ ಬಳಲುವವರು, ಹೊರ ಆವರಣದಲ್ಲಿ ದೈಹಿಕವಾಗಿ ದಿನನಿತ್ಯ ಕೆಲಸ ಮಾಡುವ ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಮುಂತಾದವರಿಗೆ ಹೆಚ್ಚು ಜೊಪಾನ ಮಾಡಲು

ಮಧ್ಯಾನ್ಹ 12 ಗಂಟೆಯಿಂದ 4 ಗಂಟೆಯವರೆಗೆ ಮನೆಯಲ್ಲಿ ಇರುವಂತೆ, ಅಗತ್ಯ ಸಂದರ್ಭದಲ್ಲಿ ಮನೆ ಹೊರಗೆ ಬರುವಾಗ, ಹತ್ತಿ ಉಡುಪು ಬಳಕೆ, ➘4

## ಏ.23, 24ರಂದು ಸಿಇಟಿ ಪರೀಕ್ಷೆ

### ವ್ಯವಸ್ಥಿತವಾಗಿ ನಿರ್ವಹಣೆಗೆ ಅಪರ ಜಿಲ್ಲಾಧಿಕಾರಿ ಸೂಚನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.18**- 2025-2026ನೇ ಸಾಲಿನ ವೃತ್ತಿಪರ ಕೋರ್ಸಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಇದೇ ಏಪ್ರಿಲ್ 23 ಹಾಗೂ 24ರಂದು ಜಿಲ್ಲೆಯ 19 ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಯ ಲು ಅಗತ್ಯವಿರುವ ಸಕಲ ಏರ್ಪಾಡು ಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿ ದರು.

ಏಪ್ರಿಲ್ 18ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಿಇಟಿ ಪರೀಕ್ಷೆ ಕುರಿತು ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಿಇಟಿ ಪರೀಕ್ಷೆಯಲ್ಲಿ ಮತ್ತಷ್ಟು ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಫ್ರಿಸ್ಕಿಂಗ್, ಫೇಸ್ ರೆಕಗ್ನಿಶನ್ ಸೌಲಭ್ಯವನ್ನು ಮಾಡಲಾಗುತ್ತದೆ. ಪರೀಕ್ಷಾ ಮುನ್ನಾದಿನ ಪ್ರಾತ್ಯಕ್ಷಿಕೆಯ ಮೂಲಕ ಖಚಿತಪಡಿಸಿಕೊಳ್ಳಬೇಕೆಂದು ಪರೀಕ್ಷಾ ಕೇಂದ್ರದ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು. ವಿಜ್ಞಾನ ಉಪನ್ಯಾಸಕರನ್ನು ಕೊಠಡಿ ಮೇಲ್ವಿಚಾರಕರಾಗಿ ನೇಮಿಸಬಾರದು.

ವಿಜ್ಞಾನವನ್ನು ಹೊರತುಪಡಿಸಿ ಇತರ ವಿಷಯದ ಉಪನ್ಯಾಸಕರನ್ನು ನೇಮಿಸಿಕೊಳ್ಳಬಹುದು. ಪ್ರತಿ 24 ಅಭ್ಯರ್ಥಿಗಳಿಗೆ ಒಬ್ಬರಂತೆ ಅವಶ್ಯವಿರುವಷ್ಟು ಕೊಠಡಿ ಮೇಲ್ವಿಚಾರಕರನ್ನು ನೇಮಿಸಬೇಕು. ಅಲ್ಲದೆ ಕೊಠಡಿ ಮೇಲ್ವಿಚಾರಕರಿಗೆ ಕೊಠಡಿ ನಿಯೋಜನೆಯನ್ನು ವೀಕ್ಷಕರ ಸಮ್ಮುಖದಲ್ಲಿ ಲಾಟರಿ ಮೂಲಕ ಮಾತ್ರ ಮಾಡಬೇಕು.

ಪರೀಕ್ಷೆ ಪ್ರಾರಂಭವಾಗುವ ಮೊದಲು ಪ್ರತಿ ಅವಧಿಗೆ ಪ್ರತ್ಯೇಕ ಲಾಟರಿಗಳನ್ನು ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಪರೀಕ್ಷೆ ಕೇಂದ್ರದಲ್ಲಿ ಶೌಚಾಲಯ ಸ್ವಚ್ಛವಿರಬೇಕು. ಪರೀಕ್ಷಾ ಕೇಂದ್ರದೊಳಗೆ ಕೈ ಗಡಿಯಾರ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಕೊಠಡಿಯ ➘4

## ಮರ್ಚಡ್‌ನಲ್ಲಿ ಸಮುದಾಯ ಭವನ ಕುಸಿದು ಇಬ್ಬರು ಮಕ್ಕಳ ಸಾವು

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.19**-ಬಯಲಾಟ ನೋಡುವ ವೇಳೆ ಸಮುದಾಯ ಭವನದ ಗೋಡೆ ಕುಸಿದು ಇಬ್ಬರು ಮಕ್ಕಳು ಸ್ಥಳದಲ್ಲಿಯೇ ಮೃತಪಟ್ಟ ಘಟನೆ ಮಾನವಿ ತಾಲೂಕಿನ ಬೈಲ್ ಮರ್ಚೆಡ್ ಗ್ರಾಮದಲ್ಲಿ ಶುಕ್ರವಾರ ರಾತ್ರಿ ಜರುಗಿದೆ.

ಗ್ರಾಮದ ತನ್ವಿತ ನಾಯಕ(2) ಹಾಗೂ ವಿಶ್ವನಾಥ ನಾಯಕ(9)



ಮೃತ ಕಂದಮ್ಮಗಳಾಗಿದ್ದು, ಗ್ರಾಮದ ದ್ಯಾವಮ್ಮ ದೇವಸ್ಥಾನದ ಹತ್ತಿರದ ಸಮುದಾಯ ಭವನದ ಎದುರು ಬಯಲಾಟ ಪ್ರದರ್ಶನ ನಡೆದಿತ್ತು. ಅದನ್ನು ವೀಕ್ಷಿಸಲು ಗ್ರಾಮದ ಜನರು ಸೇರಿದ್ದು, ಸಮುದಾಯ ಭವನದ ಕೆಳಗೆ ಕುಳಿತಿದ್ದ ಇಬ್ಬರ ಮಕ್ಕಳ ಮೇಲೆ ಏಕಾಏಕಿ ಸಮುದಾಯ ಭವನದ ನಾಮ ಫಲಕವಿರುವ ಗೋಡೆ ಕುಸಿದಿದೆ.

ತನ್ವಿತ ಮತ್ತು ವಿಶ್ವನಾಥಗೆ ಗಂಭೀರ ಗಾಯಗಳಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದು,

ಮೂರು ವರ್ಷದ ಯಲ್ಲಮ್ಮ, ವಿಶಾಲಾಕ್ಷಿ, ಬಸಮ್ಮ ಲಕ್ಷ್ಮೀ ಎಂಬುವವರಿಗೆ ಗಂಭೀರ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ನಗರದ ಒಪೆಕ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸಮುದಾಯ ಭವನವು 8 ವರ್ಷಗಳ ಹಿಂದೆ ನಿರ್ಮಿಸಲಾಗಿತ್ತು ಎನ್ನಲಾಗಿದ್ದು, ಘಟನಾ ಸ್ಥಳಕ್ಕೆ ಮಾನ್ವಿ ಪೊಲೀಸರು ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

## ದೇವದುರ್ಗದ ಕೂಳೂರು ಗ್ರಾಮದಲ್ಲಿ ಬಸವೇಶ್ವರ ಜಯಂತಿ, ಮೈಲಾರಲಿಂಗೇಶ್ವರ ಜಾತ್ರೆ ಅಂಗವಾಗಿ ರಾಜ್ಯ ಮಟ್ಟದ ಎತ್ತುಗಳ ಕಲ್ಲೆಳೆಯುವ ಸ್ಪರ್ಧೆ- ರಾಚಣ್ಣ ನಾಯಕ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.19**-ಶ್ರೀ ಬಸವೇಶ್ವರ ಜಯಂತಿ ಹಾಗೂ ಶ್ರೀ ಮೈಲಾರಲಿಂಗೇಶ್ವರ ಜಾತ್ರಾ ಮಹೋತ್ಸವದಂಗವಾಗಿ ಏ.20 ರಿಂದ 22 ವರೆಗೆ ದೇವದುರ್ಗ ತಾಲೂಕಿ ಕೋಳೂರು ಗ್ರಾಮದಲ್ಲಿ ಸರಪಳಿ ಹರಿಯುದು, ಉಚ್ಚಾಯ ಹಾಗೂ ರಾಜ್ಯ ಮಟ್ಟದ ಎತ್ತುಗಳ ಭಾರ ಎಳೆಯುವ ಸ್ಪರ್ಧೆಯನ್ನು ಗಂಡುಗಲಿ ಕುಮಾರರಾಮ ಜನ ಕಲ್ಯಾಣ ದೇವದುರ್ಗ ತಾಲೂಕ ಸಮಿತಿಯಿಂದ ಆಯೋಜಿಸಲಾಗಿದೆ ಎಂದರು ತಾಲೂಕ ಅಧ್ಯಕ್ಷ ರಾಚಣ್ಣ ನಾಯಕ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಏ.20 ರಂದು ಬೆಳಿಗ್ಗೆ 10.30ಕ್ಕೆ ಸರಪಳಿ ಹರಿಯುವ ಸ್ಪರ್ಧೆ ನಡೆಯಲಿದೆ.



ಸಂಜೆ. 5.30ಕ್ಕೆ ಉಚ್ಚಾಯ ಮಹೋತ್ಸವ ನಡೆಯುತ್ತದೆ. ಏ.21 ರಂದು ರಾಜ್ಯ ಮಟ್ಟದ ಭಾರದ ಕಲ್ಲು ಎಳೆಯುವ ಸ್ಪರ್ಧೆ ನಡೆಯುತ್ತದೆ. ರಾಜ್ಯ ಸೇರಿದಂತೆ ನೇರೆ ಆಂದ್ರಪ್ರದೇಶ, ತೆಲಂಗಾಣಧ ಸ್ಪರ್ಧಿಗಳ ಬಾಗವಹಿಸಲಿದ್ದಾರೆ ಎಂದರು.

ಕಾರ್ಯಕ್ರಮದ ಸಾನಿಧ್ಯವನ್ನು ಮದರಕಲ್ ಅಂಬಾಮಠದ ಶ್ರೀ ಅವಧೂತ ರಾಜಯೋಗಿ ಸಂತನಾಮ ದೇವೆಗೌಡ ಶರಣರುವಹಿಸಿಕೊಳ್ಳಲಿದ್ದಾರೆ. ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನದ ಪೀಠಾಧಿಪತಿಗಳಾದ ಶ್ರೀ ನಿಜಲಿಂಗ ➘4

## ರಂಜಿತ್ ಪ್ಯಾಲೇಸ್‌ನಲ್ಲಿ ಅಗ್ನಿ ಅವಘಡ ಶಾರ್ಟ ಸರ್ಕೂಟ್‌ನಿಂದ ಆತಂಕ ಸೃಷ್ಟಿ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.19**-ರಾಯಚೂರು: ನಗರದ ಸ್ಟೇಷನ್ ರಸ್ತೆಯಲ್ಲಿರುವ ರಂಜೀತ್ ಪ್ಯಾಲೇಸ್ ಹೋಟೆಲ್‌ನಲ್ಲಿ ಕಳೆದ ಮಧ್ಯರಾತ್ರಿ ಸಂಭವಿಸಿದ ಅಗ್ನಿ ಅವಘಡ ಕೆಲಕಾಲ ಆತಂಕದ ವಾತಾವರಣಕ್ಕೆ ಕಾರಣವಾಯಿತು.

ಶಾರ್ಟ್ ಸರ್ಕ್ಯೂಟ್‌ನಿಂದ ಹೋಟೆಲ್‌ನ ಎಸಿಗೆ ಬೆಂಕಿ ಹೊತ್ತಿಕೊಂಡು, ಹೋಟೆಲ್‌ನಲ್ಲಿ ದಟ್ಟ ಹೊಗೆ ಆವರಿಸಿಕೊಂಡ ಘಟನೆ ನಡೆದಿದೆ.

ಮಧ್ಯರಾತ್ರಿ ಸಮಯದಲ್ಲಿ ಅಚಾನಕ್ಕಾಗಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಹೋಟೆಲ್‌ನಲ್ಲಿದ್ದ ಅತಿಥಿಗಳು ಮತ್ತು ಸಿಬ್ಬಂದಿಗಳಲ್ಲಿ ಗಾಬರಿ ಉಂಟಾಯಿತು. ಬೆಂಕಿಯಿಂದ ದಟ್ಟವಾದ ಹಾಗೂ ಹೊಗೆ ವೇಗವಾಗಿ ಹರಡಿದ ಹಿನ್ನಲೆಯಲ್ಲಿ ಕೆಲ ಪೀಠೋಪಕರಣಗಳು ಸುಟ್ಟು ಭಸ್ಮವಾಗಿವೆ ಎಂದು ತಿಳಿದು ಬಂದಿದೆ.

ದಟ್ಟ ಹೊಗೆ ಹಬ್ಬುತ್ತಿದ್ದಂತೆ ಕೊಠಡಿಗಳಲ್ಲಿ ತಂಗಿದ್ದ ಪ್ರವಾಸಿಗರು ತಕ್ಷಣ ಹೊರಗೆ ಧಾವಿಸಿ ತಮ್ಮ ಪ್ರಾಣರಕ್ಷಣೆಗಾಗಿ ಕಿರುಚಾಟ ನಡೆಸಿದ ದೃಶ್ಯಗಳು ಕಂಡುಬಂದವು.

ಘಟನೆಯ ಮಾಹಿತಿ ದೊರಕುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿ, ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾದರು.

ಬೆಂಕಿ ಇನ್ನಷ್ಟು ವ್ಯಾಪಿಸುವುದನ್ನು ತಡೆದು, ದೊಡ್ಡ ಅನಾಹುತ ತಪ್ಪಿದಂತಾಗಿದೆ. ಈ ಘಟನೆ ಕೆಲ ಕಾಲ ಸ್ಥಳದಲ್ಲಿ ಭಯದ ವಾತಾವರಣ ನಿರ್ಮಾಣವಾಗಲು ಕಾರಣವಾಯಿತು. ಹೋಟೆಲ್‌ನಲ್ಲಿದ್ದ ಅತಿಥಿಗಳು ಆತಂಕಗೊಂಡು ಹೊರಗೆ ಸೇರಿ ನಿಂತಿದ್ದು, ಪರಿಸ್ಥಿತಿ ನಿಯಂತ್ರಣಕ್ಕೆ ಬಂದ ಬಳಿಕವೇ ಮತ್ತೆ ಒಳಗೆ ಪ್ರವೇಶಿಸಿದರು ಎಂದು ತಿಳಿದು ಬಂದಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲವೆಂದು ತಿಳಿದು ಬಂದಿದೆ. ಹೋಟೆಲ್ ನಲ್ಲಿ ಯಾವುದೇ ➘4

### ಶಿಕ್ಷಕರ ಸಂಘದ ಚುನಾವಣೆಗೆ ಹೈಕೋರ್ಟ ತಡೆ

## ಮತದಾರರ ಪಟ್ಟಿ ಸರಿಪಡಿಸಲು ಸೂಚನೆ ಹೋರಾಟಕ್ಕೆ ಸಂದ ಜಯ-ಮಹಾಂತೇಶ ಬಿರಾದಾರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.19**-ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆಗೆ ಹೈಕೋರ್ಟ ತಡೆಯಾಜ್ಞೆ ನೀಡಿದ್ದು ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಮಹಾಂತೇಶಬಿರಾದಾರ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಪ್ರಾಥಮಿಕ ಶಾಲಾ ಶಿಕ್ಷಕರ ಚುನಾವಣೆ ಪ್ರಕ್ರಿಯೆಗಳು ಪ್ರಾರಂಭವಾದಾಗ ಪರಿಮಳ ಪಾಟೀಲ್ ಸೇರಿ ನನ್ನ ಹೆಸರನ್ನು ಮತದಾರರ ಪಟ್ಟಿಯಿಂದ ಉದ್ದೇಶ ಪೂರಿತವಾಗಿ ತೆಗೆದುಹಾಕಲಾಗಿತ್ತು. ಅನೇಕ ಬಾರಿ ವಿನಂತಿಸಿದರೂ ಸೇರ್ಪಡೆ ಮಾಡದೇ ಇರುವದರಿಂದ ಕಲ್ಬುರ್ಗಿ ಹೈಕೋರ್ಟನಲ್ಲಿ ದಾವೆ ಹೂಡಲಾಗಿತ್ತು. ಹೈಕೋರ್ಟ ಮತದಾರರ ಪಟ್ಟಿಗೆ ಸೇರಿ ಚುನಾವಣೆ ಸ್ಪರ್ಧೆಗೆ ಅವಕಾಶ ನೀಡುವಂತೆ ಸೂಚಿಸಿತು. ಅದೇ ರೀತಿ ರಾಜ್ಯದ ವಿವಿಧ ತಾಲೂಕಗಳಲ್ಲಿ ಆಗಿರುವ ಮತದಾರರ ಪಟ್ಟಿ ದೋಷದ ಕುರಿತಾಗಿ ಬೆಂಗಳೂರಿನಲ್ಲಿ 3 ಸಾವಿರ್ರೂ ಅಧಿಕ ಅರ್ಜಿಗಳು ಸಲ್ಲಿಕೆಯಾಗಿದ್ದವು. ➘4

### ಏ.20 ರಂದು ಜಗಜ್ಯೋತಿ ಬಸವೇಶ್ವರಜಯಂತಿ

## 21 ರಂದು ಭಾವಚಿತ್ರ ಮೆರವಣಿಗೆ-ಶರಣಭೂಪಾಲ ನಾಡಗೌಡ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.19**-ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಏ.20 ರಂದು ಆಚರಿಸಲು ನಿರ್ಧರಿಸಲಾಗಿದ್ದು, ಭಾವಚಿತ್ರ ಮೆರವಣಿಗೆಯನ್ನು ಏ.21 ರಂದು ಸಂಜೆ ಆಯೋಜಿಸಲಾಗಿದೆ ಎಂದು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಶರಣಭೂಪಾಲ ನಾಡಗೌಡ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಏ.20 ರಂದು ಬಸವ ಜಯಂತಿ ಅಂಗವಾಗಿ ಬೆಳಿಗ್ಗ 8 ಗಂಟೆಗೆ ಷಟಸ್ಥಲ ಧ್ವಜಾರೋಹಣ ವೀರಶೈವ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ. ನಂತರ ಬೆಳಿಗ್ಗೆ 9ಗಂಟೆಗೆ ಶ್ರೀಬಸವೇಶ್ವರ ವೃತ್ತದಲ್ಲಿ ಜಿಲ್ಲಾಡಳಿತದ ಸಹಯೋಗದಲ್ಲಿ ಮಾಲಾರ್ಪಣೆ ಕಾರ್ಯಕ್ರಮ ನಡೆಯುತ್ತದೆ. ನಂತರ ಬೆಳಿಗ್ಗ 10 ಗಂಟೆಗೆ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು ಸಾನಿಧ್ಯವನ್ನು ಮಟಮಾರಿ ಸಾವಿರದೇವರ ಸಂಸ್ಥಾನದ ಶ್ರೀ ವೀರಭದ್ರ ಶಿವಾಚಾರ್ಯರು, ಚಿಕ್ಕಸೂಗರು ಚೌಕಿ ಮಠದ ಡಾ.ಸಿದ್ದಲಿಂಗ ಮಹಾಸ್ವಾಮಿಗಳು, ಕಿಲ್ಲೆ ಬೃಹನ್ಮಠದ ಶ್ರೀ ಶಾಂತಮಲ್ಲ ಶಿವಾಚಾರ್ಯರು, ಸೋಮವಾರಪೇಟೆ ಮಠದ ಶ್ರೀ ಅಭಿನವ ರಾಚೋಟಿ ವೀರ ಶಿವಾಚಾರ್ಯರು,ಮಂಗಳವಾರಪೇಟೆ ಮಠದ ಶ್ರೀ ವೀರಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಸೇರಿ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಮೈಸೂರಿನ ಶರಣಸಾಹಿತಿ ಶಿವಬುದ್ದಿ ಹಲ್ಲರೇ ಇವರಿಂದ ವಿಶೇಷ ➘4

# ದೇಶದ ಮಹಿಳೆಯರ ಕ್ಷಮೆ ಕೋರಿದ ಪ್ರಧಾನಿ; ಪ್ರತಿಪಕ್ಷಗಳ ಪಾಪದ ಕೆಲಸವನ್ನು ಜನರು ಎಂದಿಗೂ ಮರೆಯಲ್ಲ; ಮೋದಿ ವಾಗ್ದಾಳಿ

**ನವದೆಹಲಿ,ಏ.19**-ಕಾಂಗ್ರೆಸ್ ಮತ್ತು ಮಿತ್ರ ಪಕ್ಷಗಳ ಪಾಪದ ಕೆಲಸವನ್ನು ದೇಶದ ಜನರು ಎಂದಿಗೂ ಕ್ಷಮಿಸುವುದಿಲ್ಲ ಎಂದು ಪ್ರತಿಪಕ್ಷಗಳ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದರು.

ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ಸೋಲಾದ ಮರುದಿನವೇ ದೇಶವನ್ನು ಉದ್ದೇಶಿಸಿ ಪ್ರಧಾನಿ ಭಾಷಣ ಮಾಡಿ, ಸ್ವಾರ್ಥ ರಾಜಕೀಯಕ್ಕಾಗಿ ದೇಶದ ಮಹಿಳೆಯರ ಸಬಲೀಕರಣದ ಹೋರಾಟವನ್ನು ಸ್ಥಗಿತಗೊಳಿಸಿದ ವಿರೋಧ ಪಕ್ಷಗಳನ್ನು ಟೀಕಿಸಿದರು.

ನಮ್ಮ ಪ್ರಯತ್ನಗಳು ಯಶಸ್ವಿಯಾಗಲಿಲ್ಲ. ಮಹಿಳಾ ಮೀಸಲಾತಿ ಮಸೂದೆಗೆ ತಿದ್ದುಪಡಿಗಳನ್ನು ಮಾಡಲು ಸಾಧ್ಯವಾಗಲಿಲ್ಲ. ಇದಕ್ಕಾಗಿ ನಾನು ದೇಶದ ಎಲ್ಲ ತಾಯಂದಿರು ಮತ್ತು ಸಹೋದರಿಯರಲ್ಲಿ ಕ್ಷಮೆಯಾಚಿಸುತ್ತೇನೆ ಎಂದು ಮೋದಿ ತಿಳಿಸಿದರು.

ಕಾಂಗ್ರೆಸ್, ಟಿಎಂಸಿ ಮತ್ತು ಡಿಎಂಕೆ ಸೇರಿ ಮಿತ್ರ ಪಕ್ಷಗಳು ನಮ್ಮ ಮಹಿಳಾ ಶಕ್ತಿಯ ವಿರುದ್ಧ ತಮ್ಮ ಸ್ವಾರ್ಥ ರಾಜಕೀಯಕ್ಕಾಗಿ ಏನು ಮಾಡಿವೆ ಎಂಬುದನ್ನು ದೇಶದ ಮಹಿಳೆಯರು ನೋಡಿದ್ದಾರೆ. ಮಹಿಳಾ ಮೀಸಲಾತಿ ಮಸೂದೆಯನ್ನು ವಿರೋಧಿಸುವ ಮೂಲಕ ಪ್ರತಿಪಕ್ಷಗಳು ಪಾಪ ಮಾಡಿವೆ ಮತ್ತು ಇದಕ್ಕಾಗಿ ಅವರಿಗೆ ಖಂಡಿತವಾಗಿಯೂ ಶಿಕ್ಷೆಯಾಗುತ್ತದೆ ಎಂದು ಪ್ರಧಾನಿ ತಿಳಿಸಿದರು. ನಮಗೆ ರಾಷ್ಟ್ರದ ಹಿತಾಸಕ್ತಿ ಮುಖ್ಯ. ಆದರೆ ಕೆಲವರಿಗೆ ಪಕ್ಷದ ಹಿತಾಸಕ್ತಿ ಎಲ್ಲವೂ ಆಗಿದೆ. ಆದ್ದರಿಂದ ಪಕ್ಷದ ಹಿತಾಸಕ್ತಿಗಾಗಿ ರಾಷ್ಟ್ರದ ಹಿತಾಸಕ್ತಿಯನ್ನು ಮರೆಮಾಡಿ ಮಹಿಳಾ ಮೀಸಲಾತಿ ಮಸೂದೆಯನ್ನು ಸೋಲಿಸಿದ್ದಾರೆ. ಮಹಿಳೆ ಎಲ್ಲವನ್ನೂ ಮರೆಯುತ್ತಾಳೆ, ಆದರೆ ತನಗೆ ಮಾಡಿದ ಅವಮಾನವನ್ನು ಎಂದಿಗೂ ಮರೆಯುವುದಿಲ್ಲ ಎಂದು ಪ್ರಧಾನಿ ಮೋದಿ ಹೇಳಿದರು.

ಮಹಿಳೆಯರ ಹಿತಾಸಕ್ತಿ ಮಸೂದೆ ಸೋತಾಗ ಕಾಂಗ್ರೆಸ್, ಡಿಎಂಕೆ, ಎಸ್‌ಪಿ ಮತ್ತು ಟಿಎಂಸಿಯಂತಹ ಪಕ್ಷಗಳು ಚಪ್ಪಾಳೆ ತಟ್ಟುತ್ತಿರುವುದು ತುಂಬಾ ನೋವಿನ ಸಂಗತಿ. ಮಹಿಳೆಯರ ಹಕ್ಕುಗಳನ್ನು ಕಸಿದುಕೊಳ್ಳುವ ಮೂಲಕ ಅವರು ತಮ್ಮ ಮೇಜುಗಳನ್ನು ಬಡಿಯುತ್ತಿದ್ದರು. ಅವರು ಕೇವಲ ಮೇಜು ಬಡಿಯುತ್ತಿರಲಿಲ್ಲ, ಅದು ಮಹಿಳೆಯರ ಘನತೆ ಮತ್ತು ಸ್ವಾಭಿಮಾನದ ಮೇಲಿನ ಹೊಡೆತಗಳಾಗಿವೆ ಎಂದು ಮೋದಿ ಅಭಿಪ್ರಾಯಪಟ್ಟರು.

ಇನ್ನು ಕ್ಷೇತ್ರ ಪುನರ್ ವಿಂಗಡಣೆ ಬಗ್ಗೆ ಪ್ರತಿಪಕ್ಷಗಳು ಸುಳ್ಳು ಹೇಳುತ್ತಿವೆ. ಈ ಮಸೂದೆಯಿಂದ ಯಾವ ರಾಜ್ಯಗಳ ಪ್ರಾತಿನಿಧ್ಯದ ಅನುಪಾತವು ಬದಲಾಗುವುದಿಲ್ಲ ಮತ್ತು ಯಾರ ಪ್ರಾತಿನಿಧ್ಯವೂ ಕಡಿಮೆಯಾಗುವುದಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ ಎಂದರು.

ಬ್ರಿಟಿಷರಿಂದ ಒಡೆದು ಆಳುವ ರಾಜಕೀಯ ಕಲಿತಿರುವ ಕಾಂಗ್ರೆಸ್ ಇಂದಿಗೂ ಅದನ್ನು ಮುಂದುವರಿಸಿದೆ. ದೇಶದೊಳಗೆ ಬಿರುಕುಗಳನ್ನು ಉಂಟುಮಾಡುವ ಭಾವನೆಗಳನ್ನು ಕಾಂಗ್ರೆಸ್ ಯಾವಾಗಲೂ ಪ್ರಚೋದಿಸುತ್ತದೆ ಎಂದು ಮೋದಿ ವಾಗ್ದಾಳಿ ನಡೆಸಿದರು.

ಮಹಿಳಾ ಮೀಸಲಾತಿ ವಿಷಯವನ್ನು ಕಾಂಗ್ರೆಸ್ ವಿರೋಧಿಸುತ್ತದೆ. ಈ ದಿಕ್ಕಿನಲ್ಲಿ ಪ್ರಯತ್ನಗಳು ನಡೆದಾಗಲೆಲ್ಲಾ ಕಾಂಗ್ರೆಸ್ ಯಾವಾಗಲೂ ಅಡ್ಡಿ ಮಾಡಿದೆ. ಈ ಬಾರಿಯೂ ಸಹ, ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳು ಮಸೂದೆ ತಡೆಯಲು ಸುಳ್ಳುಗಳನ್ನು ಬಳಸಿದವು. ಈ ಮೂಲಕ ದೇಶದ ದಾರಿ ತಪ್ಪಿಸಲು ಪ್ರಯತ್ನಿಸಿದರು ಎಂದು ದೂರಿದರು.

ನಾರಿ ಶಕ್ತಿ ಮಸೂದೆ ಇಂದಿನ ಅಗತ್ಯವಾಗಿದೆ. ಆದರೆ ಪ್ರತಿಪಕ್ಷಗಳು ಸಂವಿಧಾನ ನಿರ್ಮಾತೃಗಳ ಭಾವನೆಗಳನ್ನು ಅವಮಾನಿಸಿವೆ ಮತ್ತು ಇದಕ್ಕಾಗಿ ಜನರು ಶಿಕ್ಷಿಸಲಿದ್ದಾರೆ. 2029ರ ಚುನಾವಣೆಯಿಂದ ಮಹಿಳೆಯರಿಗೆ 40 ವರ್ಷಗಳಿಂದ ಬಾಕಿ ಉಳಿದಿದ್ದ ಹಕ್ಕುಗಳನ್ನು ನೀಡುವ ಬಗ್ಗೆ ಮತ್ತು ಅಡೆತಡೆಗಳನ್ನು ತೆಗೆದುಹಾಕಲು ಇದು ಮಹಾಯಜ್ಞವಾಗಿತ್ತು ಎಂದು ಪ್ರತಿಪಾದಿಸಿದರು.

ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಸಂಸತ್ತಿನಲ್ಲಿ ಈ ಪ್ರಯತ್ನದ ಭ್ರೂಣಹತ್ಯೆ ಮಾಡಿವೆ. ಮಹಿಳೆಯರಿಗೆ ಅಧಿಕಾರ ನೀಡುವುದನ್ನು ಈ ವಂಶಪಾರಂಪರ್ಯ ಪಕ್ಷಗಳು ಹೆದರುತ್ತಿವೆ. ತಮ್ಮ ಕುಟುಂಬದ ಹೊರಗಿನ ಮಹಿಳೆಯರು ಮುಂದುವರಿಯುವುದನ್ನು ಅವರು ಎಂದಿಗೂ ಬಯಸುವುದಿಲ್ಲ ಎಂದು ಪ್ರಧಾನಿ ಆರೋಪಿಸಿದರು.

ಸದ್ಯಕ್ಕೆ ಮಹಿಳಾ ಮೀಸಲಾತಿ ಮಸೂದೆಗೆ ಸೋಲಾಗಿದೆ. ಆದರೆ ಮಹಿಳೆಯರ ಮೀಸಲಾತಿ ಪರ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಮೋದಿ ತಿಳಿಸಿದರು.ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಮತ್ತು ಲೋಕಸಭಾ ಕ್ಷೇತ್ರಗಳನ್ನು ಹೆಚ್ಚಿಸುವ ಸಂವಿಧಾನ ತಿದ್ದುಪಡಿ ಮಸೂದೆಗೆ ಲೋಕಸಭೆಯಲ್ಲಿ ಶುಕ್ರವಾರ ಸೋಲಾಗಿದೆ. ನಿನ್ನೆ ಮಸೂದೆ ಪರ ಕೇವಲ 298 ಮತಗಳು ಬಿದ್ದರೆ, ಮಸೂದೆಯ ವಿರುದ್ಧವಾಗಿ 230 ಮತಗಳು ಬಂದಿದ್ದವು. ಈ ಮೂಲಕ ಮತ ಚಲಾಯಿಸಿದ 528 ಸದಸ್ಯರಲ್ಲಿ, ಬಹುಮತಕ್ಕೆ ಮೂರನೇ ಎರಡರಷ್ಟು ಅಂದರೆ 352 ಮತಗಳ ಅಗತ್ಯವಿತ್ತು. ಆದರೆ ನರೇಂದ್ರ ಮೋದಿ ಸರ್ಕಾರಕ್ಕೆ ಲೋಕಸಭೆಯಲ್ಲಿ ಬಹುಮತವಿರಲಿಲ್ಲ. ಆದರೆ ಕೇವಲ 298 ಮತಗಳು ಬಂದಿದ್ದರಿಂದ ಮಸೂದೆಗೆ ಸೋಲಾಗಿತ್ತು.

ಇದರೊಂದಿಗೆ ಸಂವಿಧಾನ ತಿದ್ದುಪಡಿ ಮಸೂದೆ ಮೂಲಕ 2029ರಲ್ಲಿ ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಜಾರಿಗೊಳಿಸುವ ಮತ್ತು ಲೋಕಸಭೆಯ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಹಿನ್ನಡೆಯಾಗಿತ್ತು.

# ದಕ್ಷಿಣ ಭಾರತದಲ್ಲಿ ಸುಪ್ರೀಂ ಕೋರ್ಟ್ ಪೀಠ ಸ್ಥಾಪಿಸುವ ಅಗತ್ಯವಿದೆ-ಸಿಎಂ ಸಿದ್ದರಾಮಯ್ಯ



**ಬೆಂಗಳೂರು,ಏ.19**-ನಾವು ಇಂದು ಕೃತಕ ಬುದ್ಧಿಮತ್ತೆಯ ಕಾಲಘಟ್ಟಕ್ಕೆ ಅಡಿಯಿಟ್ಟಿದ್ದೇವೆ. ಕೃತಕ ಬುದ್ಧಿಮತ್ತೆಯ ತಾಂಬೆಂಗಳೂರು: ರಾಜ್ಯದ ಉಚ್ಚ ನ್ಯಾಯಾಲಯಕ್ಕೆ ಪ್ರವೇಶವನ್ನು ಸುಧಾರಿಸಬೇಕೆನ್ನುವ ಬಲವಾದ ಅಗತ್ಯವಿದೆ. ದಕ್ಷಿಣ ಭಾರತದಲ್ಲಿ ಸರ್ವೋಚ್ಚ ನ್ಯಾಯಾಲಯದ ಪೀಠ ಸ್ಥಾಪನೆಯಾದರೆ ನ್ಯಾಯವನ್ನು ಖಾತ್ರಿಪಡಿಸುವ ನಿಟ್ಟಿನಲ್ಲಿ ಬಹು ದೊಡ್ಡ ಹೆಜ್ಜೆಯನ್ನು ಇರಿಸಿದಂತಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಂಗಳೂರಿನ ಜಿಕೆವಿಕೆಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣದಲ್ಲಿ ನಡೆದ ನ್ಯಾಯಾಂಗ ಅಧಿಕಾರಿಗಳ 22ನೇ ದ್ವೈವಾರ್ಷಿಕ ರಾಜಮಟ್ಟದ ಸಮ್ಮೇಳನದಲ್ಲಿ ಮಾತನಾಡಿದ ಅವರು, ಪ್ರಸಕ್ತ ಕಾಲಘಟ್ಟದಲ್ಲಿ ಕಾನೂನು ಮತ್ತು ತಂತ್ರಜ್ಞಾನವು ಪ್ರತ್ಯೇಕ ಕ್ಷೇತ್ರಗಳಾಗಿ ಉಳಿದಿಲ್ಲ. ಈಗ ಮುಂದುವರೆದು ನ್ಯಾಯಾಂಗ ಕ್ಷೇತ್ರಕ್ಕೆ ಕೃತಕ ಬುದ್ಧಿಮತ್ತೆಯ ಪ್ರವೇಶವಾಗಿದೆ. ಅದರಿಂದಾಗಿ

ಆಡಳಿತ, ಹಕ್ಕುಗಳು ಮತ್ತು ನ್ಯಾಯದ ಸ್ವರೂಪವನ್ನು ರೂಪಿಸುವ ಪರಸ್ಪರ ಸಂಬಂಧ ಹೊಂದಿರುವ ಶಕ್ತಿಗಳ ನಡುವೆ ನಿರ್ಣಾಯಕ ಹಂತದಲ್ಲಿ ನಾವು ಇಂದು ನಿಂತಿದ್ದೇವೆ. ಈ ಪಯಣದಲ್ಲಿ ನ್ಯಾಯಾಂಗಕ್ಕೆ ಅದರ ಸ್ವಾತಂತ್ರ್ಯವನ್ನು ಸಂಪೂರ್ಣವಾಗಿ ಗೌರವಿಸುತ್ತಲೇ ಅದಕ್ಕೆ ಬೆಂಬಲ ನೀಡುವುದು, ಸಕ್ರಿಯಗೊಳಿಸುವುದು ಮತ್ತು ಬಲಪಡಿಸುವುದು ಆಡಳಿತದ ಪಾತ್ರ. ನ್ಯಾಯಾಂಗ ಮೂಲಭೂತ ಸೌಕರ್ಯ, ಡಿಜಿಟಲ್ ಪರಿವರ್ತನೆ, ನಾವೀನ್ಯತೆ ಹಾಗೂ ನ್ಯಾಯದಾನವು ಒಟ್ಟಾಗಿ ಪ್ರಗತಿ ಹೊಂದಲು ಸೂಕ್ತವಾದ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸಲು ಕರ್ನಾಟಕ ಸರ್ಕಾರವು ಬದ್ಧವಾಗಿದೆ.

ನ್ಯಾಯದಾನ ವ್ಯವಸ್ಥೆಗೆ ವೇಗ ಮತ್ತು ಪ್ರವೇಶವನ್ನು ಒದಗಿಸಲು ಕರ್ನಾಟಕದಲ್ಲಿ ನಾವು ಖಚಿತ ಸುಧಾರಣೆಗಳನ್ನು ಕೈಗೊಂಡಿದ್ದೇವೆ. ಕಾಲಬದ್ಧ ಪ್ರಕರಣ ನಿರ್ವಹಣೆ, ಸರಹದ್ದುಗಳ ಪುನರ್ ರಚನೆಯ ಮೂಲಕ ಉಚ್ಚ ನ್ಯಾಯಾಲಯಗಳ ಹೊರೆಯನ್ನು ತಗ್ಗಿಸುವುದುಹಾಗೂ ಸರ್ಕಾರಿ ವ್ಯಾಜ್ಯ ಅಭ್ಯಾಸಗಳನ್ನು ಬಲಪಡಿಸಲಾಗುತ್ತಿದೆ ಎಂದಿದ್ದಾರೆ.ಆದರೂ, ಇದೇ ಸಮಯದಲ್ಲಿ ನ್ಯಾಯಾಂಗ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆಯನ್ನು ಅಳವಡಿಸಿಕೊಳ್ಳುವುದರ ಕುರಿತು ಆಳವಾದ ಕಳವಳಗಳು ಮೂಡದೇ ಇರಲಾರದು. ಅಲ್ಗಾರಿದಮಿಕ್ ಪಕ್ಷಪಾತವು ಕಾನೂನಿನ ಮುಂದೆ ಸಮಾನತೆಯ ಖಾತರಿಯನ್ನು ಹಾಳುಮಾಡಬಹುದು. ಅಪಾರದರ್ಶಕ ವ್ಯವಸ್ಥೆಗಳು ನಮ್ಮ ನ್ಯಾಯಾಂಗ ವ್ಯವಸ್ಥೆಯ ತಾರ್ಕಿಕ ನಿರ್ಧಾರಗಳ ಸಿದ್ಧಾಂತವನ್ನು ದುರ್ಬಲಗೊಳಿಸುವ ಆತಂಕವನ್ನು ಅಲ್ಲಗಳೆಯುವಂತಿಲ್ಲ ಎಂದಿದ್ದಾರೆ. ನಮ್ಮ ಪ್ರಜಾಪ್ರಭುತ್ವದ ಮೂಲಾಧಾರವಾಗಿರುವ ನ್ಯಾಯಾಂಗ ಸ್ವಾತಂತ್ರ್ಯವನ್ನು ಬಾಹ್ಯ ಒತ್ತಡಗಳಿಂದ ಮಾತ್ರವಲ್ಲದೆ ಸೂಕ್ಷ್ಮ ತಾಂತ್ರಿಕ ಅವಲಂಬನೆಯಿಂದಲೂ ಸಂರಕ್ಷಿಸುವ ಹೊಣೆಗಾರಿಕೆ ನಮ್ಮ ಮೇಲಿದೆ. ನ್ಯಾಯಾಧೀಶರ ಅಧಿಕಾರವನ್ನು ಎಂದಿಗೂ ಅಲ್ಗಾರಿದಮ್‌ನ ಅಧಿಕಾರವು ಮರೆಮಾಚಬಾರದು. ಸಾಂವಿಧಾನಿಕ ನೈತಿಕತೆಯು ನೈಸರ್ಗಿಕ ಭಾವನೆಯಲ್ಲ, ಅದನ್ನು ಬೆಳೆಸಿಕೊಳ್ಳಬೇಕು ಎಂದು ಡಾ. ಬಿ.ಆರ್. ಅಂಬೇಡ್ಕರ್ ನಮಗೆ ನೆನಪಿಸಿದ್ದರು. ಸಾಂವಿಧಾನಿಕ ಮೌಲ್ಯಗಳು ತಾಂತ್ರಿಕ ಅಳವಡಿಕೆಗೆ ಮಾರ್ಗದರ್ಶನ ನೀಡುತ್ತವೆಯೇ ಹೊರತು ಅದೇ ಪರ್ಯಾಯವಲ್ಲ ಎಂಬುದನ್ನು ಮನಗಾಣಬೇಕು.

ಕೃತಕ ಬುದ್ಧಿಮತ್ತೆಯ ಸಾಕ್ಷಿ, ಪುರಾವೆಗಳು ನಮ್ಮ ಕಾನೂನು ವ್ಯವಸ್ಥೆಗೆ ಹೊಸ ಸವಾಲುಗಳನ್ನು ಒಡ್ಡುತ್ತಿವೆ. ಡೀಪ್‌ಫೇಕ್‌ಗಳು, ಸಂಶ್ಲೇಷಿತ ಡೇಟಾ, ಪುರಾವೆಗಳ ದೃಢೀಕರಣ ಸವಾಲಾಗಿ ಪರಿಣಮಿಸಿದೆ. ಡಿಜಿಟಲ್ ಯುಗದಲ್ಲಿ ವಿಶ್ವಾಸಾರ್ಹ ಸಾಕ್ಷಿಗಳು ಯಾವುವು ಎಂಬುದನ್ನು ನಿರ್ಧರಿಸಲು ನ್ಯಾಯಾಲಯಗಳ ಅಗತ್ಯ ಹೆಚ್ಚುತ್ತಿದೆ. ಹಾಗೆ ಮಾಡುವಾಗ, ಸತ್ಯವು ಕೇವಲ ತಾಂತ್ರಿಕ ಅತ್ಯಾಧುನಿಕತೆಯಲ್ಲಿ ಅಲ್ಲ, ಪರಿಶೀಲನೆ ಮತ್ತು ಸಮಗ್ರತೆಯ ಮೇಲೆ ಆಧಾರಿತವಾಗಿದೆ ಎಂದು ನಾವು ಖಚಿತಪಡಿಸಿಕೊಳ್ಳಬೇಕು. ಭಾರತದಲ್ಲಿ ಕೃತಕ ಬುದ್ಧಿಮತ್ತೆಗಾಗಿ ನಿಯಂತ್ರಕ ಚೌಕಟ್ಟನ್ನು ರೂಪಿಸುವಲ್ಲಿ ನ್ಯಾಯಾಂಗವು ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಸರಿಯಾದ ಪ್ರಕ್ರಿಯೆ, ಅನುಪಾತ ಮತ್ತು ಗೌಪ್ಯತೆಯ ಹಕ್ಕಿನ ಸಂರಕ್ಷಣೆಯಂತಹ ಸುಸ್ಥಾಪಿತ ಸಾಂವಿಧಾನಿಕ ಸಿದ್ಧಾಂತಗಳ ಮೂಲಕ ಕೃತಕ ಬುದ್ಧಿಮತ್ತೆಯ ಪರಿಧಿಯನ್ನು ನಿರ್ಧರಿಸಬೇಕಿದೆ. ನ್ಯಾಯಾಂಗವು ತಂತ್ರಜ್ಞಾನದ ಬಳಕೆದಾರ ಮಾತ್ರವಲ್ಲದೆ ಸಮಾಜದಲ್ಲಿ ಅದರ ನಿಯೋಜನೆಗೆ ಮಾರ್ಗದರ್ಶನ ನೀಡುವ ನೈತಿಕ ದಿಕ್ಸೂಚಿಯೂ ಆಗಿದೆ ಎಂದು ಹೇಳಿದ್ದಾರೆ. ನ್ಯಾಯ ದಾನ ವ್ಯವಸ್ಥೆಯನ್ನು ಬಲಪಡಿಸಲು ಆಡಳಿತವು ಪಾಲುದಾರನಾಗಿ ಕೆಲಸ ಮಾಡಬೇಕೇ ಹೊರತು ಅದನ್ನು ಒತ್ತುವರಿ ಮಾಡುವಂತಾಗಬಾರದು.ನ್ಯಾಯ ಎನ್ನುವುದು ಕೇವಲ ಹೊಂದುವುದಲ್ಲ, ಬದಲಿಗೆ ಎತ್ತಿ ಹಿಡಿಯಬೇಕಾದ ನೈತಿಕ ಜವಾಬ್ದಾರಿ ಎಂಬ ಮೂಲಭೂತ ಸತ್ಯವನ್ನು ನಾವು ಎಂದಿಗೂ ಮರೆಯಬಾರದು.

# ಜೀವಾವಧಿ ಶಿಕ್ಷೆಗೊಳಗಾದ ವಿನಯ್ ಕುಲಕರ್ಣಿ ಸೇರಿ 16 ಮಂದಿ ಅಪರಾಧಿಗಳಿಗೆ ಖೈದಿ ಸಂಖ್ಯೆ ನೀಡಿದ ಜೈಲಾಧಿಕಾರಿಗಳು

**ಬೆಂಗಳೂರು,ಏ.18**-ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಒಳಗಾಗಿ ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ಸೇರಿರುವ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಸೇರಿದಂತೆ 16 ಅಪರಾಧಿಗಳಿಗೆ ಸಜಾ ಬಂಧಿ ಖೈದಿ ನಂಬರ್ ನೀಡಲಾಗಿದೆ.



ಶಾಸಕ ವಿನಯ್ ಕುಲಕರ್ಣಿ ಸೇರಿ 17 ಅಪರಾಧಿಗಳನ್ನು ಶುಕ್ರವಾರ ರಾತ್ರಿ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕರೆತರಲಾಗಿತ್ತು. ಈ ವೇಳೆ ಜೈಲಾಧಿಕಾರಿಗಳು ತಾತ್ಕಾಲಿಕವಾಗಿ ಯುಟಿಪಿ ನಂಬರ್ (ವಿಚಾರಣಾಧೀನ ಖೈದಿ) ನೀಡಿದ್ದರು. ಆದರೆ, ಶನಿವಾರ ಬೆಳಗ್ಗೆ ಕೆಲವು ಕಾನೂನು ಪ್ರಕ್ರಿಯೆಗಳ ನಂತರ ವಿನಯ್ ಕುಲಕರ್ಣಿ ಅವರಿಗೆ ಸಜಾ ಬಂಧಿ ಖೈದಿ ನಂಬರ್ 16110 ನೀಡಲಾಗಿದೆ. ಜೊತೆಗೆ ಎಲ್ಲ ಅಪರಾಧಿಗಳಿಗೆ ಸಜಾ ಬಂಧಿ ಖೈದಿ ನಂಬರ್ ಅಧಿಕೃತವಾಗಿ ನೀಡಲಾಗಿದೆ.

ವಿನಯ್ ಕುಲಕರ್ಣಿ ಹಾಗೂ ಈ ಪ್ರಕರಣದ ಇತರ 17 ಅಪರಾಧಿಗಳನ್ನು ಪ್ರಸ್ತುತ ಡಿ ಬ್ಯಾರಕ್‌ನ ಕ್ವಾರಂಟೈನ್ ಸೆಲ್‌ಗೆ ಕಳುಹಿಸಲಾಗಿದೆ. ಅಲ್ಲಿ ವಿನಯ್ ಕುಲಕರ್ಣಿ ಜೊತೆಗೆ ಇತರ ಮೂವರು ಅಪರಾಧಿಗಳನ್ನು ಒಂದು ಬ್ಯಾರಕ್‌ನಲ್ಲಿ ಇರಿಸಿದರೆ, ಇತರ ಅಪರಾಧಿಗಳನ್ನು ಪಕ್ಕದ ಬ್ಯಾರಕ್‌ನಲ್ಲಿ ಇರಿಸಲಾಗಿದೆ. ಮುಂದಿನ 10 ದಿನಗಳ ಕಾಲ ಎಲ್ಲರೂ ಇಲ್ಲೇ ಇರಲಿದ್ದಾರೆ. ನಂತರ ಅವರನ್ನು ಬೇರೆಡೆಗೆ ಸ್ಥಳಾಂತರಿಸಲಾಗುತ್ತದೆ. ಇನ್ನು ಇದೇ ಪ್ರಕರಣದಲ್ಲಿ 7 ವರ್ಷ ಶಿಕ್ಷೆಗೊಳಗಾಗಿರುವ ಸರ್ಕಲ್ ಇನ್‌ಸ್ಪೆಕ್ಟರ್ ಚನ್ನಕೇಶವ ಟಿಂಗರಿಕರ್ ಅವರನ್ನು ಪ್ರತ್ಯೇಕ ಸೆಲ್‌ನಲ್ಲಿ ಇರಿಸಲಾಗಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

ವಿನಯ್ ಕುಲಕರ್ಣಿ ಹಾಗೂ ಸಹ ಅಪರಾಧಿಗಳ ಸಜಾ ಬಂಧಿ ಸಂಖ್ಯೆ:

1) ವಿಕ್ರಂ ಬಳ್ಳಾರಿ - 16097
2) ಕೀರ್ತಿ ಕುಮಾರ್ ಬೆಳ್ಳಟ್ಟಿ - 16098
3) ಸಂದೀಪ್ ಸವದತ್ತಿ - 16099
4) ವಿನಾಯಕ ಕಟಗಿ - 16100
5) ಮಹಾಬಲೇಶ್ವರ ಹೊಂಗಳೇ - 16101
6) ಸಂತೋಷ ಸವದತ್ತಿ - 16102
7) ದಿನೇಶ್ -16103
8) ಅಶ್ವಥ್ - 16104
9) ಸುನಿಲ್ - 16105
10) ನಜೀರ್ ಅಹ್ಮದ್ - 16106
11) ಶನವಾಜ್ - 16107
12) ನೂತನ್ - 16108
13) ಹರ್ಷಿತ್ - 16109
14) ವಿನಯ್ ಕುಲಕರ್ಣಿ -16110
15) ಚಂದ್ರಶೇಖರ್ ಇಂಡಿ -16111
16) ವಿಕಾಸ್ ಕಲಬುರ್ಗಿ - 16112
17) ಚನ್ನಕೇಶವ ಟಿಂಗರಿಕರ್ - 16113

ಜೈಲಲ್ಲಿ ಕಣ್ಣೀರು ಹಾಕಿದ ವಿನಯ್: ವಿನಯ್ ಕುಲಕರ್ಣಿ ಜೈಲಿನಲ್ಲಿ ಇರಲಾಗದೇ ಶುಕ್ರವಾರ ರಾತ್ರಿಯಿಡೀ ಚಿಂತೆಗೆ ಒಳಗಾಗಿದ್ದರು. ಜೊತೆಗೆ, ಶುಕ್ರವಾರ ರಾತ್ರಿ ಚಪಾತಿ, ಊಟ ನೀಡಲಾಗಿತ್ತು. ಸರಿಯಾಗಿ ಆಹಾರ ಸೇವಿಸದೇ ಮಲಗಿದ್ದರು. ತಡರಾತ್ರಿ ಸುಮಾರು 3 ಗಂಟೆಯವರೆಗೆ ಬೇಸರದಲ್ಲಿ ಕಣ್ಣೀರು ಹಾಕಿದ್ದ ವಿನಯ್ ಕುಲಕರ್ಣಿ ಹಾಗೂ ಇತರ ಅಪರಾಧಿಗಳು, ನಂತರ ನಿದ್ದೆಗೆ ಜಾರಿದ್ದರು. ಶನಿವಾರ ಮುಂಜಾನೆ ಖೈದಿಗಳ ಜೊತೆಗೆ ಕೊಂಚ ಸಮಯ ಚರ್ಚೆ ನಡೆಸಿದ ವಿನಯ್ ಕುಲಕರ್ಣಿ, ಬಳಿಕ ಮೌನಕ್ಕೆ ಶರಣಾಗಿದ್ದಾರೆ. ಶನಿವಾರ ಬೆಳಗ್ಗೆ ಉಪಹಾರ ಸೇವಿಸಿ, ಮಧ್ಯಾಹ್ನ ಸ್ವಲ್ಪ ಊಟ ಸೇವಿಸಿದ್ದಾರೆ. ರಾತ್ರಿಯೂ ಸಾಮಾನ್ಯ ಖೈದಿಗಳಂತೆ ಜೈಲೂಟ ಸೇವಿಸಿದ್ದಾರೆ ಎಂದು ತಿಳಿದು ಬಂದಿದೆ. ಇವರ ಜೊತೆಗೆ, ಇತರ ಅಪರಾಧಿಗಳೂ ಸಹ ತಮ್ಮ ಕುಟುಂಬ ನೆನೆದು ಕಣ್ಣೀರು ಹಾಕುತ್ತಿದ್ದಾರೆ ಎನ್ನಲಾಗಿದೆ.

# ದೆಹಲಿ ಭೇಟಿ ಫಲಪ್ರದವಾಗಿದೆ, ಶೀಘ್ರ ಶುಭ ಸುದ್ದಿ ಸಿಗಲಿದೆ: ಶಾಸಕ ಗೋಪಾಲಕೃಷ್ಣ ಬೇಳೂರು

**ಶಿವಮೊಗ್ಗ,ಏ.19**-ನಮ್ಮ ದೆಹಲಿ ಭೇಟಿ ಫಲಪ್ರದವಾಗಿದೆ, ಶೀಘ್ರವೇ ಶುಭ ಸುದ್ದಿ ಸಿಗಲಿದೆ ಎಂದು ಸಾಗರ ಶಾಸಕ ಗೋಪಾಲಕೃಷ್ಣ ಬೇಳೂರು ವಿಶ್ವಾಸ ವ್ಯಕ್ತಪಡಿಸಿದರು. ನಗರದಲ್ಲಿ ಮಾತನಾಡಿದ ಅವರು, ಹಿರಿಯ ಶಾಸಕರು ದೆಹಲಿಗೆ ನಮ್ಮ ಹೈಕಮಾಂಡ್ ಭೇಟಿಗೆ ಹೋಗಿದ್ದೆವು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಾಹೇಬರನ್ನು ಭೇಟಿ ಮಾಡಿ ಸುಮಾರ್ ಒಂದೂವರೆ ಗಂಟೆ ಮಾತುಕತೆ ನಡೆಸಿದೆವು. ಖರ್ಗೆ ಅವರು ನಮ್ಮ ಮಾತನ್ನು ಶಾಂತವಾಗಿ ಕೇಳಿದರು. ದೆಹಲಿಗೆ ನಾವು 30 ಜನ ಹೋಗಿದ್ದೆವು. ಇದರಲ್ಲಿ ಎಲ್ಲಾರೂ ಆಕಾಂಕ್ಷಿಗಳಲ್ಲ್. 20 ಜನರು ಆಕಾಂಕ್ಷಿಗಳಾಗಿದ್ದೆವು ಎಂದರು.

ಡಿ.ಕೆ. ಶಿವಕುಮಾರ್ ಎಲ್ಲೂ ಗರಂ ಆಗಿಲ್ಲ: ಪಕ್ಷದ ರಾಜ್ಯಾಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಎಲ್ಲೂ ನಮ್ಮ ಮೇಲೆ ಗರಂ ಆಗಿಲ್ಲ. ಅವರು ಹೇಳಿಕೆ ಕೊಡುವಾಗ ನೋಡ್ಕೊಂಡಿ ಎಂದು ಹೇಳಿದ್ದಾರಷ್ಟೆ. ಡಿ.ಕೆ.ಶಿವಕುಮಾರ್ ಅವರನ್ನು ನಿನ್ನೆ ಮಾತನಾಡಿಸಿಕೊಡು ಬಂದಿದ್ದೇವೆ. ಶಿವಕುಮಾರ್ ಅವರು ನಮ್ಮ ಮೇಲೆ ಯಾವುದೇ ಸಿಟ್ಟಾಗಿಲ್ಲ. ದೆಹಲಿ ಭೇಟಿಯು ಫಲಪ್ರದವಾಗಲಿದೆ ಎಂಬ ವಿಶ್ವಾಸವಿದೆ. ಮುಂದಿನ ಒಂದೂವರೆ ತಿಂಗಳ ಒಳಗೆ ಮಂತ್ರಿ ಮಂಡಲ ಬದಲಾಗಬಹುದು, ನಮಗೆಲ್ಲಾ ಸಿಹಿ ಸುದ್ದಿ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪ್ರಧಾನ್ ಮೋದಿ ಮಹಿಳಾ ಮೀಸಲಾತಿ ಮಸೂದೆ




ಹಿಡಿದು ಚುನಾವಣಾ ಪ್ರಚಾರಕ್ಕೆ ಹೋಗುತ್ತಿದ್ದರು: ನಾರಿಶಕ್ತಿ ಬಿಲ್‌ಗೆ ನಮ್ಮ ಬೆಂಬಲವಿದೆ. ಆದರೆ ಇದನ್ನು ಪಂಚ ರಾಜ್ಯ ಚುನಾವಣೆ ಸಂದರ್ಭದಲ್ಲಿ ತರುವುದು ಸರಿಯಲ್ಲ. ಬಿಲ್ ಪಾಸ್ ಆದ್ರೆ, ಅದನ್ನು ಚುನಾವಣಾ ಭಾಷಣದಲ್ಲಿ ಹೇಳಲು ಹೋಗುತ್ತೀರಾ ಎಂದು ಬಿಜೆಪಿ ನಾಯಕರಿಗೆ ಪ್ರಶ್ನಿಸಿದರು. ಮುಂದೆ ಮತ್ತೆ ವಿಶೇಷ ಅಧಿವೇಶನ ಕರೆದು ಬಿಲ್ ಕುರಿತು ಚರ್ಚೆ ನಡೆಸಲಿ ಎಂದರು. ಸಿಎಂ, ಡಿಸಿಎಂ ಬಗ್ಗೆ ಕೆ ಎನ್. ರಾಜಣ್ಣ ಮಾತನಾಡುವುದು ಸರಿಯಲ್ಲ: ಕೆ.ಎನ್. ರಾಜಣ್ಣರವರು ಇತ್ತೀಚಿಗೆ ಬಹಳ ಹೇಳಿಕೆ ನೀಡುತ್ತಿದ್ದಾರೆ. ನೀವು ಸಿಎಂ, ಡಿಸಿಎಂ ಬಗ್ಗೆ ಮಾತನಾಡುತ್ತಿದ್ದೀರಿ. ನಿಮಗೆ ಮಂತ್ರಿಗಿರಿ ಹೋಗಿದೆ ಅಂತ ಮಾತನಾಡುತ್ತಿದ್ದೀರಾ?. ಚುನಾವಣೆಗೆ ಯಾರು ಪ್ರಚಾರಕ್ಕೆ ಹೋಗಬೇಕೆಂದು ಹೈಕಮಾಂಡ್ ಹೇಳಿತ್ತೋ ಅವರು ಹೋಗಿದ್ದರು. ಆದರೆ ನೀವು ಯಾಕೆ ಚುನಾವಣಾ ಪ್ರಚಾರಕ್ಕೆ ಹೋಗಲಿಲ್ಲ ಎಂದು ಪ್ರಶ್ನಿಸಿ, ರಾಜಣ್ಣ ನಮ್ಮ್ ಒಳ್ಳೆಯ ಸ್ನೇಹಿತರು ಎಂದು ಹೇಳಿದರು. ಮತ್ತೊಂದೆಡೆ, ನಾವು ಏನೇನೋ ಆಸೆ ಇಟ್ಟುಕೊಳ್ಳಬಹುದು. ಆದರೆ, ತೀರ್ಮಾನ ಮಾಡೋದು ಹೈಕಮಾಂಡ್. ಮುಖ್ಯಮಂತ್ರಿ ಸ್ಥಾನಕ್ಕೆ ಅರ್ಜಿ ಕರೆದರೆ ಹಾಕಬಹುದು. ಆದರೆ, ಅರ್ಜಿಯನ್ನೇ ಕರೆಯೋದಿಲ್ಲವಲ್ಲ ಎನ್ನುವ ಮೂಲಕ ಪರೋಕ್ಷವಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವ ತಾವೂ ಸಿಎಂ ಸ್ಥಾನದ ಆಕಾಂಕ್ಷಿ ಎಂಬ ಇಂಗಿತ ವ್ಯಕ್ತಪಡಿಸಿದ್ದರು. ಶಾಸಕರಿಗೆ ಮಂತ್ರಿ ಆಗುವ ಆಸೆ ಇದೆ, ಮಂತ್ರಿ ಆಗಿರುವ ಪರಮೇಶ್ವ ಅವರಿಗೆ ಸಿಎಂ ಆಗುವ ಆಸೆ ಇಲ್ಲವೇ ಎಂಬ ಮಾಧ್ಯಮಗಳ ಪ್ರಶ್ನೆಗೆ ಬೆಳಗಾವಿಯಲ್ಲಿ ಉತ್ತರಿಸಿದ ಅವರು, ನನಗೆ ಆಸೆ ಇದೆ ಅಂತಾ ನಿಮಗೆ ಯಾರು ಹೇಳಿದರು? ನಮ್ಮ ಪಕ್ಷದಲ್ಲಿ ಏನೇ ತೀರ್ಮಾನ ಆಗಬೇಕಾದರೂ, ಅದನ್ನು ಹೈಕಮಾಂಡ್ ತೀರ್ಮಾನಿಸಬೇಕು. ಸಂಪುಟ ಪುನರ್ ರಚನೆ, ಸಿಎಂ ಬದಲಾವಣೆ, ಯಾರಿಗೆ ಅರ್ಹತೆ ಇದೆ, ಯಾರಿಗೆ ಅರ್ಹತೆ ಇಲ್ಲ ಎಂಬುದು ಸೇರಿ ಎಲ್ಲವನ್ನೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದಿದ್ದರು.

# ಕಾಂಗ್ರೆಸ್‌ನ ಮಹಿಳಾ ವಿರೋಧಿ ನಿಲುವು ಸ್ಪಷ್ಟವಾಗಿದೆ, ಇದನ್ನು ಮಹಿಳೆಯರು ಕ್ಷಮಿಸುವುದಿಲ್ಲ: ಪ್ರತಿಪಕ್ಷ ನಾಯಕ ಆರ್.ಅಶೋಕ್

**ಬೆಂಗಳೂರು,ಏ.19**-ನಾರಿ ಶಕ್ತಿ ವಂದನಾ ಅಧಿನಿ ಯಮವನ್ನು ವಿರೋಧಿಸುವ ಮೂಲಕ ಕಾಂಗ್ರೆಸ್ ತನ್ನ ಮಹಿಳಾ ವಿರೋಧಿ ನಿಲುವನ್ನು ಸ್ಪಷ್ಟಪಡಿಸಿದೆ. ಇದನ್ನು ದೇಶದ ಮಹಿಳೆಯರು ಎಂದಿಗೂ ಕ್ಷಮಿಸುವುದಿಲ್ಲ. ಆದ್ದರಿಂದ, ಇನ್ನು ಕಾಂಗ್ರೆಸ್‌ನ ಮಹಿಳಾ ಘಟಕವನ್ನು ರದ್ದು ಮಾಡುವುದು ಸೂಕ್ತ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ನಾರಿ ಶಕ್ತಿ ವಂದನಾ ಅಧಿನಿಯಮವನ್ನು ಸೋಲಿಸಿ ಮಹಿಳೆಯರ ಹಕ್ಕುಗಳನ್ನು ಹತ್ತಿಕ್ಕಿದ ಕಾಂಗ್ರೆಸ್ ವಿರುದ್ಧ ಇಂದು ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾಧ್ಯಮಗೋಷ್ಠಿ ನಡೆಸಿ, ಪೋಸ್ಟರ್ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ಆರ್. ಅಶೋಕ್, ದೇಶದ ಮಹಿಳೆಯರಿಗೆ ಸಂವಿಧಾನದತ್ತವಾದ ಹಕ್ಕನ್ನು ನೀಡುವ ನಾರಿ ಶಕ್ತಿ ವಂದನಾ ಅಧಿನಿಯಮ ಮಸೂದೆಯನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ತಂದರೂ ಲೋಕಸಭೆಯಲ್ಲಿ ವಿರೋಧ ಪಕ್ಷಗಳು ಸೋಲಿಸಿವೆ. ಮಹಿಳಾ ಸಬಲೀಕರಣದ ಮಸೂದೆ ವಿಫಲವಾಗಿರುವುದು ವಿರೋಧ ಪಕ್ಷಗಳ ಪಿತೂರಿ, ನಿರ್ಲಕ್ಷ್ಯ ಹಾಗೂ ಮಹಿಳಾ ವಿರೋಧಿ ನಿಲುವಿನ ಸ್ಪಷ್ಟ ಸಂಕೇತ. ಮಹಿಳೆಯರ ಹಕ್ಕುಗಳ ಬಗ್ಗೆ ವೇದಿಕೆಯಲ್ಲಿ ಕಾಂಗ್ರೆಸ್ ನಾಯಕರು ದೊಡ್ಡ ಭಾಷಣಗಳನ್ನು ಮಾಡುತ್ತಾರೆ. ಆದರೆ ಅದನ್ನು ಕಾರ್ಯರೂಪಕ್ಕೆ ತರುವಲ್ಲಿ ಸೋತಿದ್ದಾರೆ. ಈ ಮಸೂದೆಗೆ ಮತ ನೀಡಿಲ್ಲವೆಂದರೆ ಕಾಂಗ್ರೆಸ್‌ನ ಮಹಿಳಾ ಘಟಕವನ್ನು ರದ್ದು ಮಾಡುವುದು ಸೂಕ್ತ. ಮಹಿಳಾ ಮುಖಂಡರು ಶಾಸನಸಭೆಗೆ ಹೋಗಬಹುದೆಂದು ಕನಸು ಕಂಡಿದ್ದರು. ಮಹಿಳೆಯರ ಹಕ್ಕನ್ನು ನಿರ್ಲಕ್ಷಿಸುವ ಕಾಂಗ್ರೆಸ್ ಸರ್ಕಾರವನ್ನು ಜನರು ಕ್ಷಮಿಸುವುದಿಲ್ಲ. ಕಾಂಗ್ರೆಸ್‌ಗೆ ಮಹಿಳೆಯರು ಎಂದರೆ ಕೇವಲ ಮತ ನೀಡುವವರಾಗಿದ್ದಾರೆ ಎಂದು ಟೀಕಿಸಿದರು.



60 ವರ್ಷ ಆಡಳಿತ ನಡೆಸಿದ ನೆಹರು, ಇಂದಿರಾಗಾಂಧಿ ಮಹಿಳಾ ಮೀಸಲು ತರಲಿಲ್ಲ. ಪ್ರಧಾನಿ ನರೇಂದ್ರ ಮೋದಿಯವರು ಮಸೂದೆ ತಂದಾಗ ಅದನ್ನು ವಿರೋಧಿಸಿ ಕಾಂಗ್ರೆಸ್‌ನವರು ಮಹಿಳೆಯರಿಗೆ ದ್ರೋಹ ಮಾಡಿದ್ದಾರೆ. ಮಹಿಳಾ ವಿರೋಧಿ ಭಾವನೆ ಕಾಂಗ್ರೆಸ್‌ನ ರಕ್ತದಲ್ಲೇ ಇದೆ. ಮಹಿಳೆಯರಿಗೆ 2,000 ರೂ. ಹಾಗೂ ಉಚಿತ ಬಸ್ ನೀಡಿದರೆ ಸಾಕು, ಅವರಿಗೆ ರಾಜಕೀಯ ಪ್ರಾತಿನಿಧ್ಯ ಬೇಡ ಎಂದು ಕಾಂಗ್ರೆಸ್ ಹಾಗೂ ಮಿತ್ರಪಕ್ಷಗಳು ತೀರ್ಮಾನಿಸಿವೆ. ಮುಂದಿನ ಚುನಾವಣೆಯಲ್ಲಿ ಇನ್ನಷ್ಟು ಹಣ ಕೊಟ್ಟು ಮತ ಪಡೆದರೆ ಸಾಕು ಎಂದು ಅವರು ಅಂದುಕೊಂಡಿದ್ದಾರೆ. ಮುಂದಿನ ಚುನಾವಣೆಗಳಲ್ಲಿ ಮಹಿಳೆಯರು ಇವರೆಲ್ಲರಿಗೂ ಪಾಠ ಕಲಿಸುತ್ತಾರೆ ಎಂದರು.

ದಕ್ಷಿಣ ಭಾರತದ ರಾಜ್ಯಗಳಲ್ಲಿ ಒಟ್ಟು 129 ಸಂಸತ್ ಸ್ಥಾನಗಳಿದ್ದು, ಅದನ್ನು 195ಕ್ಕೆ ಏರಿಸುವ ಅವಕಾಶವಿತ್ತು. ಕ್ಷೇತ್ರ ಮರುವಿಂಗಡಣೆ ಬಗ್ಗೆ ಭಿನ್ನಾಭಿಪ್ರಾಯವಿದ್ದರೆ ಅದನ್ನು ಚರ್ಚೆ ಮಾಡಬಹುದಿತ್ತು. ಈ ಹಿಂದೆಯೂ ಮರುವಿಂಗಡಣೆ ಪ್ರಕ್ರಿಯೆ ನಡೆದಿತ್ತು. ಆಗ ಬಾಯಿಗೆ ಬಟ್ಟೆ ತುರುಕಿಕೊಂಡಿದ್ದ ಕಾಂಗ್ರೆಸ್‌ನವರು ಈಗ ಮಾತ್ರ ವಿರೋಧಿಸುತ್ತಿದ್ದಾರೆ. ಕ್ಷೇತ್ರ ಮರುವಿಂಗಡಣೆ ಸಾಮಾನ್ಯ ಪ್ರಕ್ರಿಯೆಯಾಗಿದ್ದು, ಅದನ್ನು ಕೇಂದ್ರ ಸರ್ಕಾರ ಮಾಡಿದೆ. ಮಹಿಳೆಯರು ಇದನ್ನು ವಿರೋಧಿಸಿ ಕಾಂಗ್ರೆಸ್‌ಗೆ ಹಾದಿಬೀದಿಗಳಲ್ಲಿ ಪ್ರಶ್ನೆ ಮಾಡಬೇಕು. ಕಾಂಗ್ರೆಸ್‌ನ್ನು ದೇಶದಿಂದ ಓಡಿಸುವ ಕೆಲಸವನ್ನು ಮಹಿಳೆಯರು ಮಾಡಲಿದ್ದಾರೆ. ಹಿಂದೆ ತ್ರಿವಳಿ ತಲಾಖ್ ರದ್ದು ಮಾಡಿದಾಗಲೂ ಕಾಂಗ್ರೆಸ್ ವಿರೋಧ ಮಾಡಿತ್ತು. ಮಹಿಳೆಯರ ಪಾಲಿಗೆ ಇದು ಕರಾಳ ದಿನ ಎಂದು ಹೇಳಿದರು.

ಇದನ್ನು ಚುನಾವಣೆಯ ಲಾಭವಾಗಿ ಬಿಜೆಪಿ ಬಳಸಿಕೊಳ್ಳುತ್ತಿಲ್ಲ. ಮಸೂದೆಯನ್ನು ಬೆಂಬಲಿಸಿ ಅದರ ಕ್ರೆಡಿಟ್ ಅನ್ನು ಕಾಂಗ್ರೆಸ್ ಪಡೆಯಬಹುದಿತ್ತು. ಇನ್ನು ಮೂರು ವರ್ಷದಲ್ಲೇ ಇದು ಜಾರಿಯಾಗಲಿದೆ. ಆದರೆ ಕಳೆದ 60 ವರ್ಷದಿಂದ ಇದು ಜಾರಿಯಾಗಲೇ ಇಲ್ಲ ಎಂಬುದನ್ನು ಗಮನಿಸಬೇಕು. ಕ್ಷೇತ್ರ ಮರುವಿಂಗಡಣೆಯಿಂದ ದಕ್ಷಿಣದ ರಾಜ್ಯಗಳಿಗೂ ಸಂಸತ್ ಸ್ಥಾನಗಳು ಹೆಚ್ಚಲಿವೆ ಎಂದು ಹೇಳಿದರು.

ಜಿಬಿಎ ರಚನೆಗೆ ಕಾಂಗ್ರೆಸ್ ಸರ್ಕಾರ ಯಾವ ಮಾನದಂಡ ಮಾಡಿದೆ? ಅಲ್ಲಿ ಕೂಡ 2011ರ ಜನಗಣತಿಯನ್ನೇ ಪರಿಗಣಿಸಲಾಗಿದೆ. ಆದರೆ ಬಿಜೆಪಿ ಅದನ್ನು ಮಾನದಂಡವಾಗಿ ಪರಿಗಣಿಸಿದರೆ ಅದನ್ನು ವಿರೋಧಿಸುತ್ತಾರೆ ಎಂದರು.

ಬಜೆಟ್ ಬಳಿಕ ಕುತಂತ್ರಿ ಬುದ್ಧಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಬಳಿಕ ಕುತಂತ್ರಿ ಬುದ್ಧಿ ತೋರಿಸಿದ್ದಾರೆ. ಗೃಹಬಳಕೆ ವಿದ್ಯುತ್ ದರವನ್ನು 65 ಪೈಸೆ ಹೆಚ್ಚಿಸಲಾಗಿದೆ. ಕಳೆದ ಬೆಲೆ ಏರಿಕೆಗಳನ್ನು ಮಾಡಿ ಸುಮಾರು 65,000 ಕೋಟಿ ರೂ. ಹೆಚ್ಚುವರಿ ತೆರಿಗೆ ವಸೂಲಿ ಮಾಡಿದ್ದರು.

ಜಿಬಿಎ ಚುನಾವಣೆಗೆ ಮುನ್ನ ಇನ್ನಷ್ಟು ತೆರಿಗೆಗಳ ಹೇರಿಕೆಯಾಗಲಿದೆ. ನೌಕರರಿಗೆ ಸಂಬಳ ಕೊಡಲು ಕೂಡ ಸರ್ಕಾರದ ಬಳಿ ಹಣವಿಲ್ಲ. ಅನಾಥ ಮಕ್ಕಳಿಗೆ ಪ್ರೋತ್ಸಾಹಧನ, ಗುತ್ತಿಗೆದಾರರ ಬಿಲ್, ಅಂಗನವಾಡಿ ಸಹಾಯಕರ ಗೌರವಧನ ಹೆಚ್ಚಳ ಮೊದಲಾದವುಗಳಿಗೆ ಹಣವಿಲ್ಲ.

2,000 ರೂ. ನೀಡಿ 22,000 ರೂ. ವಸೂಲಿ ಮಾಡುತ್ತಾರೆ. ಇದರ ಬಗ್ಗೆ ಮುಂದಿನ ವಿಧಾನಸಭೆ ಅಧಿವೇಶನದಲ್ಲಿ ಲೆಕ್ಕ ಕೊಡುತ್ತೇನೆ ಎಂದು ಹೇಳಿದರು.

ಜಿಬಿಎ ಚುನಾವಣೆ ಗೆಲ್ಲುವುದಿಲ್ಲವೆಂದು ಕಾಂಗ್ರೆಸ್‌ಗೆ ಗೊತ್ತಾಗಿರುವುದರಿಂದಲೇ ಚುನಾವಣೆ ನಡೆಸುತ್ತಿಲ್ಲ. ಮಾರ್ಗಸೂಚಿ ದರ, ಕಸ ಶುಲ್ಕ, ಪ್ರಮಾಣಪತ್ರಗಳ ಶುಲ್ಕಗಳನ್ನು ಏರಿಸಲಾಗಿದೆ. ಆದ್ದರಿಂದಲೇ ಸೋಲುವ ಭಯ ಅವರಲ್ಲಿದೆ. ಸದ್ಯಕ್ಕಂತೂ ಚುನಾವಣೆ ಮಾಡುವುದಿಲ್ಲ ಎಂದರು.

### 100 ರೈತರಿಗೆ ಕೊಳವೆ ಭಾವಿಗಳಿಗೆ ಪಂಪ್ ಹಾಗೂ ಮೋಟಾರ್ ವಿತರಣೆ

# ಅಂತರ್ಜಲ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ-ಸಚಿವ ಬೋಸರಾಜು

ಕನ್ನಡ ಮಾತೃ ಭೂಮಿ ವಾರ್ತೆ

**ಸಿರವಾರ,ಏ.18-** ನೀರಿನ ಪ್ರಾಮುಖ್ಯತೆಯನ್ನು ಅರಿತು ದೂರದೃಷ್ಟಿಯನ್ನು ಇಟ್ಟುಕೊಂಡು ಅಂತರ್ಜಲ ಮಟ್ಟವನ್ನು ಹೆಚ್ಚಳ ಮಾಡಲು ಮತ್ತು ಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಕೊಳವೆ ಭಾವಿಗಳನ್ನು ಕೊರೆಯುವುದು ಮತ್ತು ಹಳ್ಳ ನಾಲಾಗಳಿಗೆ ಚೆಕ್'ಡ್ಯಾಮ್ ನಿರ್ಮಾ ಣದಂತಹ ಹಲವು ಕಾಮಗಾರಿ ಗಳನ್ನು ಕೈಗೊಳ್ಳುವ ಮೂಲಕ ಗ್ರಾಮೀಣ ಭಾಗದ ಅಂತರ್ಜಲ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡ'ಲಾಗಿದೆ ಎಂದು, ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಇಲಾಖೆ ಸಚಿವ ಎನ್.ಎಸ್.ಬೋಸರಾಜು ಹೇಳಿದರು.

ತಾಲೂಕಿನ ನವಲಕಲ್ ಗ್ರಾಮ ದ ಶಾಂಭವಿ ಸಂಸ್ಥಾನ ಮಠದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಶನಿ ವಾರ ಆಯೋಜಿಸಿದ್ದ ಎಸ್ಸಿ ಪಿ-ಟಿಎಸ್ಪಿ ಯೋಜನೆಯಡಿ 2025- 26ನೇ ಸಾಲಿನಲ್ಲಿ 100 ಜನ ಎಸ್'ಸಿ-ಎಸ್'ಟಿ ರೈತರಿಗೆ ಕೊಳವೆ ಭಾವಿಗಳಿಗೆ ಸಂಬಂಧಿಸಿದ ಪಂಪ್ ಹಾಗೂ ಮೋಟಾರ್ ಸಾಮಾಗ್ರಿ ಗಳನ್ನು ವಿತರಿಸಿ ಮಾತನಾಡಿದರು.

ಸಿರವಾರ ತಾಲೂಕಿನ ಎಸ್'ಸಿ-ಎಸ್'ಟಿ ಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಸಣ್ಣ ನೀರಾವರಿ ಇಲಾಖೆಯ (ಎಸ್ಸಿಪಿ-ಟಿಎಸ್ಪಿ) ಯೋಜನೆಯ ಅನುದಾನಲ್ಲಿ ಒಟ್ಟು 348 ಕೊಳವೆ ಭಾವಿಗಳನ್ನು ಕೊರೆಯಲು ಗುರಿ ಹೊಂದಿದ್ದು, ಈಗಾಗಲೇ 100ಕ್ಕೂ ಹೆಚ್ಚು ಕೊಳವೆ ಭಾವಿಗಳನ್ನು ಕೊರೆದಿದ್ದು ಬಾಕಿಯಿರುವ



ಕೊಳವೆ ಭಾವಿಗಳನ್ನು ಆದಷ್ಟು ಶೀಘ್ರವೇ ಕೊರೆದು ನೀರಿನ ಸೌಲಭ್ಯ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನವಲಕಲ್ ಬೃಹನ್ಮಠದ ಅಭಿನವ ಸೋಮನಾಥ ಶಿವಾಚಾರ್ಯರು, ಶಾಸಕ ಜಿ.ಹಂಪಯ್ಯ ನಾಯಕ, ಲಿಂಗಸೂಗೂರು ಮಾಜಿ ಶಾಸಕ ಡಿ.ಎಸ್.ಹೂಲಗೇರಿ, ಹಿರಿಯ ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ, ಶರಣಯ್ಯ ನಾಯಕ ಗುಡದಿನ್ನಿ, ತಹಸೀಲ್ದಾರ್ ಅಶೋಕ ಪವಾರ್, ಸಣ್ಣ ನೀರಾವರಿ ಇಲಾಖೆ ಎಇಇ ಲೋಕೇಶ್, ತಾ.ಪಂ ಇಒ ಶಶಿಧರ್ ಸ್ವಾಮಿ, ಪಂಚ ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ಬ್ರಿಜೇಶ್ ಪಾಟೀಲ್,

ಪ.ಪಂ.ಅಧ್ಯಕ್ಷ ಹಾಜಿ ಚೌದ್ರಿ, ಜಿ.ಪಂ.ಮಾಜಿ ಸದಸ್ಯ ಕಿರಿಲಿಂಗಪ್ಪ ಕವಿತಾಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ ಸಾಹುಕಾರ, ಮುಖಂಡರಾದ ಬಸವರಾಜ್ ಪಾಟೀಲ್ ಅತ್ತನೂರು, ಪ.ಪಂ ಮಾಜಿ ಅಧ್ಯಕ್ಷ ವೈ ಭೂಪನ ಗೌಡ, ಪ.ಪಂ.ಸದಸ್ಯ ಹಸನ್ ಅಲಿ ಸಾಬ್, ಎನ್.ರೇಣುಕಾ,

ಅಮರೇಗೌಡ ಹಂಚಿನಾಳ, ಚಂದ್ರು ಕಳಸ, ಎಚ್.ಕೆ. ಅಮರೇಶ, ಗಂಗಪ್ಪ ದಿನ್ನಿ, ಶಿವರಾಜ ಹಣಗಿ, ಶ್ರೀನಿವಾಸ್ ಜಾಲಾಪುರ ಕ್ಯಾಂಪ್, ತಿಪ್ಪಯ್ಯ ಸ್ವಾಮಿ ಕವಿತಾಳ, ರುದ್ರಪ್ಪ ಅಂಗಡಿ, ದಾನನಗೌಡ, ನಾಗಪ್ಪ ನವಲಕಲ್, ಅಬ್ರಹಾಂ ಹೊನ್ನಟಗಿ, ಜಯಪ್ಪ ಕೆಂಪು, ಪ್ರಭಾಕರ್ ಹರನಹಳ್ಳಿ, ಮಲ್ಲಪ್ಪ ದೊಡ್ಡಮನೆ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.

# ಈ ಭಾಗದ ಹೃದಯವಂತ ರಾಜಕಾರಣಿ ಅಸೀಮ ನಾಯಕ ಅನ್ವರಿ ಪಾಟೀಲರು-ಜಗದೀಶ್ ಶೆಟ್ಟರ್

ಕನ್ನಡ ಮಾತೃ ಭೂಮಿ ವಾರ್ತೆ

**ಲಿಂಗಸಗೂರ, ಏ.18-**ಪ್ರಭುದ್ದ ರಾಜಕಾರಣಿಯಾಗಿ ಹಳ್ಳಿಯಿಂದ ದಿಲ್ಲಿಯವರೆಗೆ ತಮ್ಮ ದೇ ಆದ ರಾಜಕೀಯ ಚಾಪು ಮೂಡಿ ಸಿ ಎಲ್ಲರ ಪ್ರೀತಿ ವಿಶ್ವಾಸ ದೊಂದಿಗೆ ಈ ಭಾಗದ ಹೃದಯ ವಂತ ರಾಜಕಾರಣಿ ಅಸೀಮ ನಾಯಕನಾಗಿ ಹೊರ ಹೊಮ್ಮಿದ ನಾಯಕ ಅನ್ವರಿ ಪಾಟೀಲರು ಎಂದು ಮಾಜಿ ಮುಖ್ಯ ಮಂತ್ರಿ ಹಾಲಿ ಲೋಕಸಭಾ ಸದಸ್ಯ ರಾದ ಜಗದೀಶ್ ಶೆಟ್ಟರ್ ಹೇಳಿದರು.

ಪಟ್ಟಣದಲ್ಲಿ ರಾಯಚೂರು ರಸ್ತೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ್ ಅನ್ವರಿಯವರ 84ನೇ ಜನ್ಮ ದಿನದ ಸಹಸ್ರ ಚಂದ್ರ ದರ್ಶನ ಅಭಿನಂದನ ಸಮಾರಂಭ ಹಾಗೂ ಅನ್ವರಿ ಅಸೀಮ ನಾಯಕನ ಅಭಿನಂ ದನ ಗ್ರಂಥ ಲೋಕಾರ್ಪಣೆ ಕಾರ್ಯಕ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು ಬಸವರಾಜ ಪಾಟೀಲ್ ಅನ್ವರಿಯವರು ಕೇಂದ್ರ ಸಚಿವರಾಗಿದ್ದಾಗ ಹಲವು ಕಾರ್ಖಾನೆ ಗಳನ್ನು ತಂದು ಸಾವಿರಾರು ಜನತೆಗೆ ಉದ್ಯೋಗ ದೊರಕಿಸಿ ಕೊಟ್ಟರು.

ಅವರ ರಾಜಕೀಯ ಜೀವನದ ಲ್ಲಿ ಅನೇಕ ಸವಾಲುಗಳನ್ನು ಎದುರಿಸಿ ಜನಾನುರಾಗಿ ರಾಜಕಾರಣಿಯಾಗಿ ಎಲ್ಲರ ಪ್ರೀತಿ ವಿಶ್ವಾಸ ವನ್ನು ಗಳಿಸಿದ ರಾಜಕಾರಣಿಯಾಗಿ ಬೆಳೆದಿದ್ದಾರೆ. ತಾವೆಲ್ಲರೂ ಅವರ ಮೇಲಿನ ನಂಬಿಕೆ,



ಪ್ರೀತಿ, ವಿಶ್ವಾಸಕ್ಕೆ ಸ್ಪೂರ್ತಿಯಂತೆ ಸಾವಿರಾರು ಅಭಿಮಾನಿಗಳು ಸೇರಿ ವಿಜೃಂಭಣೆಯಿಂದ ಅವರ ಜನ್ಮದಿನವನ್ನು ಆಚರಿಸುತ್ತಿರುವುದು ಬಹಳ ಸಂತೋಷ್ ತಂದಿದೆ.ಅನ್ವರಿ ಯವರ ಆಯಸ್ಸು ಆರೋಗ್ಯ ಇನ್ನೂ ಹೆಚ್ಚು ವೃದ್ಧಿಸಲಿ ಎಂದು ಭಗವಂತನಲ್ಲಿ ಎಲ್ಲರೂ ಪ್ರಾರ್ಥಿಸೋಣ ಎಂದು ಹೇಳಿದರು. ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್ ಕೆ ಪಾಟೀಲ್ ಅವರು ಅಸೀಮ ನಾಯಕನ ಅಭಿನಂದನ ಗ್ರಂಥ ಬಿಡುಗಡೆಗೊಳಿಸಿ ಮಾತನಾಡಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವನ್ನು ಶ್ರೀ ಮ. ನಿ. ಪ್ರ. ಸಿದ್ದಲಿಂಗ ಮಹಾ ಸ್ವಾಮಿಗಳು ಸುವರ್ಣಗಿರಿ ವಿರಕ್ತಮಠ, ವಳಬಳ್ಳಾರಿ ವಹಿಸಿದ್ದರು. ನೇತೃತ್ವವನ್ನು ಶ್ರೀ ಮ. ನಿ. ಪ್ರ. ಜಗದ್ಗುರು ಅಭಿನವ ಗವಿಸಿದ್ದೇಶ್ವರ ಮಹಾ ಸ್ವಾಮಿಗಳು ಶ್ರೀ ಗವಿಮಠಕೊಪ್ಪಳ ನೇತೃತ್ವ ವಹಿಸಿದ್ದರು. ಮ ನಿ. ಪ್ರ. ಗುರುಬಸವ ಮಹಾ ಸ್ವಾಮಿಗಳು ಸಂತೆಕೆಲ್ಲೂರ ಸಮ್ಮುಖವಹಿಸಿದ್ದರು.ಮ. ನಿ. ಪ್ರ. ಜಗದ್ಗುರು ಪಕೀರ ದಿಂಗಾಲೇಶ್ವರಮಹಾ ಸ್ವಾಮಿಗಳು ಶಿರಹಟ್ಟಿ,ಗುರು ಗಜದಂಡ ಶಿವಾಚಾರ್ಯರು ದೇವರ ಭೂಪೂರ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಏನ್ ಎಸ್ ಬೋಸರಾಜ್,ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ,ಸಣ್ಣ ಕೈಗಾರಿಕೆ ಸಚಿವ ಶರಣಬಸಪ್ಪ ದರ್ಶನಾಪೂರ,ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್,ಮಾಜಿ ಸಂಸದರಾದ ರಾಜಾ ಅಮರೇಶ್ವರ ನಾಯಕ, ಸಂಗಣ್ಣ ಕರಡಿ, ಶಾಸಕರಾದ ಹಂಪನಗೌಡ ಬಾದರ್ಲಿ, ಕರೆಮ್ಮ ನಾಯಕ, ಹಂಪಯ್ಯ ಸಾಹುಕಾರ, ಶಿವರಾಜ್ ಪಾಟೀಲ್,ಬಸನಗೌಡ ದದ್ದಲ್,ಶರಣಗೌಡ ಪಾಟೀಲ್ ಬಯ್ಯಾಪುರ,ಮಾಜಿ ಶಾಸಕರಾದ ಅಮರೇಗೌಡ ಪಾಟೀಲ್ ಬಯ್ಯಾ ಪುರ, ವೆಂಕಟರಾವ್ ನಾಡಗೌಡ,ಕೆ ಶಿವನಗೌಡ ನಾಯಕ, ನಂಜಯ್ಯನಮಠ, ವೆಂಕಟಪ್ಪ ನಾಯಕ, ಪ್ರತಾಪ್ ಗೌಡ ಪಾಟೀಲ್, ಗಂಗಾಧರ್ ನಾಯಕ,ದೊಡ್ಡನಗೌಡ ಪಾಟೀಲ್, ಬಸನಗೌಡ ಬ್ಯಾಗವಾಟ್ ಸೇರಿದಂತೆ ಹಲವಾರು ಹಾಲಿ ಮಾಜಿ ಶಾಸಕರು ಮುಖಂಡರು ಇದ್ದರು.ಶಾಸಕಮಾನಪ್ಪ ವಜ್ಜಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

# ಕನಕ ಭವನ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ

ಕನ್ನಡ ಮಾತೃ ಭೂಮಿ ವಾರ್ತೆ

**ಲಿಂಗಸಗೂರ,ಏ.18-** ಕೆಕೆಆರ್'ಡಿಬಿ ಅನುದಾನದಲ್ಲಿ ಪಟ್ಟಣದಲ್ಲಿ 25 ಲಕ್ಷ ರೂಪಾಯಿ ವೆಚ್ಚ ದಲ್ಲಿ ಕನಕ ಭವನ ನಿರ್ಮಾಣಕ್ಕೆ ಶಾಸಕ ಮಾನಪ್ಪ ವಜ್ಜಲ್ ಅವರು ಭೂಮಿ ಪೂಜೆ ನೆರವೇರಿಸಿದರು.



ನಂತರ ಮಾತನಾಡಿದ ಅವರು ಈಗಾಗಲೇ ನಾನು ಪ್ರತಿ ಸಾರಿ ಶಾಸಕರಾ ದಗಿನಿಂದ ಕ್ಷೇತ್ರದ ಪ್ರತಿ ಹಳ್ಳಿ ಹಳ್ಳಿಗಳಲ್ಲಿ ಹಾಲುಮತ ಸಮಾಜ ಬಾಂದವರು ಹೆಚ್ಚಿನ ರೀತಿಯಲ್ಲಿ ಆಶೀರ್ವಾದ ಮಾಡಿ ನನ್ನನ್ನು ಗೆಲ್ಲಿಸಿದ್ದು ಬಿಜೆಪಿ ಪಕ್ಷದ ಮತ್ತು ನನ್ನ ಮೇಲಿನ ಅಭಿಮಾನಕ್ಕೆಸದಾ ನಾನು ಅವರಿಗೆ ಚಿರಋಣಿಯಾಗಿರುವೆ.

ಇಂದು ಕ್ಷೇತ್ರದ ಶಾಸಕನಾಗಿ ನಿಮ್ಮ ಸೇವೆಗೆ ಸದಾ ಬದ್ದನಾಗಿದ್ದು ಕ್ಷೇತ್ರದ ವಿವಿಧ ಸಮುದಾಯದ ಜನರಅನುಕೂಲಕ್ಕಾಗಿ ಸಮುದಾಯ ಭವನಕ್ಕೆ ಹತ್ತ ರಿಂದ 50 ಲಕ್ಷ ರೂಪಾಯಿ ವರೆಗೂ ಅನುಧಾನ ನೀಡಲಾಗಿದೆ.

ಪ್ರತಿಯೊಂದು ಸಮುದಾಯದ ಸಮುದಾಯ ಭವನ ನಿರ್ಮಿಸಲು ಶಕ್ತಿ ಮೀರಿ ಪ್ರಯತ್ನ ಮಾಡುತ್ತೇನೆ ಈಗಾ ಗಲೇ ಪಟ್ಟಣವನ್ನು ಪ್ರತಿ ವಾರ್ಡ್ ಗಳಲ್ಲಿ ಸಿಸಿ ರಸ್ತೆ ವಿದ್ಯುತ್ ದೀಪ ಚರಂಡಿ ನಿರ್ಮಿಸಲು ಅನುದಾನ ಬಿಡು ಗಡೆ ಮಾಡಿದ್ದು ಪಟ್ಟಣವನ್ನ ಅತಿ ಸುಂದ ರವಾಗಿ ಕಾಣಲು ಪ್ರಯತ್ನ ಮಾಡು ತ್ತೇನೆ.

ಕುರುಬ ಸಮುದಾಯದ ಮತಗಳ ಪ್ರಮಾಣ ಶೇಕಡ 80% ರಷ್ಟು ನನಗೆ ಆಶೀರ್ವದಿಸಿದ್ದು ಅದರ ಸೇವೆಗಾಗಿ ನಿಮ್ಮ ಸಮುದಾಯ ಭವನ ಕಟ್ಟಡ ಕಟ್ಟಲು ಅನುದಾನ ಮೀಸಲಿಟ್ಟಿದ್ದೇನೆ. ಹಂತ ಹಂತವಾಗಿ ಕಾಮಗಾರಿ ನಡೆದ ಮೇಲೆ ನಿಮ್ಮ ಆಶಯದಂತೆ ಇನ್ನೂ 25 ಲಕ್ಷ ನೀಡಲು ಪ್ರಾಮಾಣಿಕ ಪ್ರಯತ್ನ ಮಾ ಡುತ್ತೇನೆ ಎಂದು ಅವರು ಹೇಳಿದರು.

ಕ್ಷೇತ್ರದ ನಮ್ಮ ಎಲ್ಲಾ ಸಮಸ್ಯೆಗೂ ಬೆನ್ನೆಲುಬಾಗಿ ನಿಂತಿರುವ ಶಾಸಕ ಮಾನಪ್ಪ ವಜ್ಜಲ್ ಅವರಿಗೆ ಮುಂದಿನ ದಿನಮಾನ ಗಳಲ್ಲಿ ಸದಾ ನಮ್ಮ ಸಮಾಜ ಭಾಂದ ವರು ಅವರಿಗೆ ಬೆನ್ನೆಲುಬಾಗಿ ನಿಲ್ಲುವುದು ನಮ್ಮ ಸಮುದಾಯದ ಆದ್ಯ ಕರ್ತವ್ಯ ವಾಗಿದೆ ಎಂದು ಸಮುದಾಯದ ಮುಖಂಡರಾದ ಕೆ ಕರಿಯಪ್ಪ ಸಿಂದನೂರ ತಮ್ಮ ಸಮುದಾಯಕ್ಕೆ ಕರೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷರಾದ ಕುಪ್ಪಣ್ಣ ಕೊಡ್ಲಿ, ಸಮಾಜ ಮುಖಂಡರಾದ ಹನುಮಂತಪ್ಪ ಕಂದಗಲ್,ಬೀರಪ್ಪ ಪೂಜಾರ,ಬಿಜೆಪಿ ಅಧ್ಯಕ್ಷರಾದ ಕೆ ನಾಗಭೂಷ ಣ್,ಹುಲ್ಲೇಶ್ ಸಾಹುಕಾರ ಕಾಚಾಪು ರ್, ಗಿರೀಮ ಲ್ಲನಗೌಡ ಕರಡಕಲ್ಲ, ಜೀವಲೆಪ್ಪ ನಾಯಕ್,ಬಾಲನಗೌಡ, ಸೇರಿದಂತೆ ಇತರರಿದ್ದರು.

# 24 ಗಂಟೆಯೊಳಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಿ - ಹಾಲಸಿದ್ದಪ್ಪ

ಕನ್ನಡ ಮಾತೃ ಭೂಮಿ ವಾರ್ತೆ

**ಮಸ್ಕಿ,ಏ.18-** ಬೇಸಿಗೆ ಅವಧಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಸಮರ್ಪಕ ಪೂರೈಕೆಗೆ ಅಗತ್ಯ ಕ್ರಮಕ್ಕೈ ಗೊಳ್ಳಬೇಕು ಎಂದು ರಾಯಚೂರು ಜಿಪಂ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ ಸೂಚಿಸಿದರು.



ಪಟ್ಟಣದ ತಾಪಂ ಸಭಾಂಗಣದಲ್ಲಿ ಶನಿವಾರ ಕುಡಿಯುವ ನೀರು, ಆಸ್ತಿ ಸಮೀಕ್ಷೆ, ಕರ ವಸೂಲಾತಿ ಸೇರಿ ವಿವಿಧ ವಿಷಯಗಳ ಕುರಿತು ಏರ್ಪಡಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ತಾಲೂಕು ಪಂಚಾಯತಿಯಲ್ಲಿ ಆರಂಭಿಸಿದ ಸಹಾಯವಾಣಿ ಸಂಖ್ಯೆ 08537-270122 ಗೆ ದಾಖಲಾಗುವ ದೂರುಗಳನ್ನು 24 ಗಂಟೆಯೊಳಗೆ ಪರಿಹರಿಸಬೇಕು. ವಾರಕೊಮ್ಮೆ ಫೀಲ್ಡ್ ಟೆಸ್ಟ್ ಕಿಟ್ ಮೂಲಕ ಗ್ರಾಪಂಯಲ್ಲಿ ನೀರಿನ ಗುಣಮಟ್ಟದ ಪರೀಕ್ಷೆ ಕೈಗೊಳ್ಳಬೇಕು. ಕನಿಷ್ಠ 15 ದಿನಗಳಿಗೊಮ್ಮೆ ನೀರಿನ ಟ್ಯಾಂಕ್ ಗಳನ್ನ್ ಶುಚಿಗೊಳಿಸಬೇಕು. ಹಾಗೆಯೇ ಒಂದು ರಜಿಸ್ಟರ್ ನಲ್ಲಿ ಫೋಟೋ ಗಳನ್ನು ದಾಖಲಿಸುತ್ತಾ ಹೋಗಬೇಕು. ತುಂಗಭದ್ರಾ ಎಡದಂಡೆ ನಾಲೆಗೆ ನೀರು ಹರಿಸುತ್ತಿದ್ದು, ಎಲ್ಲಾ ಕೆರೆಗಳನ್ನು ಭರ್ತಿಗೊಳಿಸಬೇಕು. ಈಗಾಗಲೇ ತಾಲೂಕು ಆಡಳಿತದಿಂದ ಗುರುತಿಸಿರುವ ಸಮಸ್ಯಾತ್ಮಕ ಹಳ್ಳಿಗಳಿಗೆ ನೀರು ಸರಬರಾಜು ಮಾಡಲು ಬೋರ್ ವೆಲ್ ಗಳನ್ನು ಬಾಡಿಗೆ ಪಡೆಯಲು ಪ್ರಸ್ತಾವನೆ ಸಲ್ಲಿಸಬೇಕು ಎಂದರು.

ರಾಜ್ಯ ಸರ್ಕಾರ ನೂತನವಾಗಿ ಹೊರಡಿಸಿದ ಆದೇಶದಂತೆ ಗ್ರಾಮೀಣ ಪ್ರದೇಶಗಳಲ್ಲಿ ತೆರಿಗೆ ವ್ಯಾಪ್ತಿಗೆ ಒಳಪಡದ ಆಸ್ತಿಗಳ ಸರ್ವೆ ಕೈಗೊಳ್ಳಬೇಕು. ಈ ಕಾರ್ಯಕ್ಕೆ ತೆರಿಗೆ ವಸೂಲಿಗಾರರ ಜೊತೆ ಇನ್ನುಳಿದ ಸಿಬ್ಬಂದಿಯನ್ನು ನಿಯೋಜಿಸಬೇಕು. ಏಪ್ರಿಲ್ ಅಂತ್ಯಕ್ಕೆ ಸರ್ವೆ ಕಾರ್ಯ ಪೂರ್ಣಗೊಳಿಸಿ, ತೆರಿಗೆ ವಿಧಿಸಬೇಕು. ಇದರಿಂದ ಗ್ರಾ.ಪಂಗಳ ಮೇಲೆ ಇರುವ ಆರ್ಥಿಕ ಹೊರೆ ಕಡಿಮೆಯಾಗಲಿದೆ. ಕಳೆದ ಸಾಲಿನಲ್ಲಿ ತೆರಿಗೆ ವಸೂಲಾತಿಯಲ್ಲಿ ಜಿಲ್ಲೆ ಪ್ರಥಮ ಸ್ಥಾನ ಬಂದಿದ್ದು, ಪ್ರಸಕ್ತ ಸಾಲಿನಲ್ಲಿಯೂ ಗರಿಷ್ಠ ತೆರಿಗೆ ವಸೂಲಾತಿಗೆ ನೀಲ ನಕ್ಷೆ ರೂಪಿಸಬೇಕು ಎಂದರು.

ಮಸ್ಕಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ್ ಮಾತನಾಡಿ, ತುಂಗಭದ್ರಾ ಎಡದಂಡೆ ಎಲ್ಲಾ ಕೆರೆಗಳನ್ನು ಈಗಾಗಲೇ ಭರ್ತಿಗೊಳಿಸಲಾಗಿದೆ. ಹಳ್ಳಿಗಳಲ್ಲಿ ನೀರು ಪೋಲಾಗದಂತೆ ನೀರುಗಂಟಿಗಳು ನಿಗಾವಹಿಸಬೇಕು. ಬಿಸಿಲಿನ ಝಳ ಹೆಚ್ಚುತ್ತಿದ್ದು, ಆರೋಗ್ಯ ದೃಷ್ಟಿಯಿಂದ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಹಳ್ಳಿಗಳಲ್ಲಿ ಪ್ರಚಾರ ಕೈಗೊಳ್ಳಬೇಕು ಎಂದು ಸೂಚಿಸಿದರು.

ಕಳೆದ ಆರ್ಥಿಕ ಸಾಲಿನಲ್ಲಿ ಗರಿಷ್ಠ ತೆರಿಗೆ ವಸೂಲಾತಿ ಮಾಡಿದ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ತೆರಿಗೆ ವಸೂಲಿಗಾರರನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಈ ವೇಳೆ ತಹಸೀಲ್ದಾರ್ ರಾದ ಮಂಜುನಾಥ ಬೋಗಾವತಿ, ಸಹಾಯಕ ನಿರ್ದೇಶಕರಾದ (ಪಂ.ರಾ) ಸೋಮನಗೌಡ ಪಾಟೀಲ್, ತಾಲೂಕು ಯೋಜನಾ ಅಧಿಕಾರಿಗಳಾದ ನಿಂಗಪ್ಪ, ತಾ.ಪಂ ಸಿಬ್ಬಂದಿ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ತೆರಿಗೆ ವಸೂಲಿಗಾರರು, ಕಂಪ್ಯೂಟರ್ ನಿರ್ವಾಹಕರು ಉಪಸ್ಥಿತರಿದ್ದರು.

# ಬಿಜೆಪಿ ವಿರುದ್ಧ ಮೇಟಿ ತೀವ್ರ ವಾಗ್ದಾಳಿ
## ಅಸಂವಿಧಾನಿಕ ತಂತ್ರಗೈದ ಬಿಜೆಪಿಗೆ ಸೋಲು

ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಏ.18-** ಮಹಿಳೆಯರ ಹೆಸರಿನಲ್ಲಿ ಸಂವಿಧಾನ ಮುರಿಯಲು ಅಸಂವಿಧಾನಿಕ ತಂತ್ರ ಬಳಸಿದ ಬಿಜೆಪಿ ಲೋಕಸಭೆಯಲ್ಲಿ ಮಂಡಿಸಿದ ಮಹಿಳಾ ಮೀಸಲಿಗೆ ಸೋಲಾಗಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷ ಡಾ. ಭೀಮಣ್ಣ ಮೇಟಿ ಹೇಳಿದರು.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇದು ಮಹಿಳಾ ಮೀಸಲಾತಿ ಬಿಲ್ ಅಲ್ಲವೇ ಅಲ್ಲ. ಬದಲಾಗಿ ಚುನಾವಣಾ ವ್ಯವಸ್ಥೆ ಮೇಲೆ ಹಿಡಿತ ಸಾಧಿಸಲು ಮುಂದಾಗಿದ್ದರು ಎಂದರು.

ಲೋಕಸಭೆಯಲ್ಲಿ ಪ್ರತಿಪಕ್ಷಗಳು ಒಂದಾಗುವ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಂಡಿಸಿದ ಮಹಿಳಾ ಮೀಸಲಾತಿ ಒಪ್ಪಲು ಸಾಧ್ಯವಿಲ್ಲ ಎಂಬುದು ಸಾರಿದೇವೆ.

ಇವರಿಗೆ ಮಹಿಳೆಯರ ಮೇಲೆ ನಿಜವಾದ ಕಾಳಜಿಯೇ ಇಲ್ಲ ಎಂದು ಹೇಳಿದರು. ಭಾರತ ಪ್ರಜಾಪ್ರಭುತ್ವ ದೇಶವಾಗಿದೆ. ಬಿಜೆಪಿ ಸರಕಾರ ದೇಶದ ಸಮಗ್ರತೆಗೆ ಕೊಡಲಿ ಪೆಟ್ಟು ನೀಡಲು ಮುಂದಾಗಿದೆ. ಮಹಿಳಾ ಮೀ ಸಲು ಹೆಸರಿನಲ್ಲಿ ಕೇಂದ್ರ ಸರಕಾರ ಅವೈಜ್ಞಾನಿ ಕವಾಗಿ ಕ್ಷೇತ್ರ ಮರುವಿಂಗಡಣೆ ಮಾಡಲು ಹೊರಟಿತ್ತು. ಇದಕ್ಕೆ ಅವರಿಗೆ ಲೋಕಸಭೆಯಲ್ಲಿ ತೀವ್ರ ಮುಖಭಂಗವಾಗಿದೆ ಎಂದರು.

ಕೇಂದ್ರ ಸರಕಾರ ಉದ್ದೇಶ ಪೂರ್ವಕವಾಗಿ ಮಸೂದೆ ಮಂಡನೆ ಮಾಡಿದೆ. ಅವರಿಗೆ ಮಹಿಳಾ ಸಬಲೀಕರಣ ಆಗುವುದು ಬೇಕಿಲ್ಲ. ನಾರಿಯರ ಹೆಸರಿನಲ್ಲಿ ರಾಜಕೀಯ ಮಾಡಲು ಮುಂದಾಗಿದೆ ಎಂದು ಹೇಳಿದರು. ಮೋದಿ ಅವರು ಹೇಳುವುದು ಒಂದು ಮಾಡುವುದು ಇನ್ನೊಂದು ಆಗಿದೆ. ಸರ್ವಾಧಿಕಾರಿ ಧೋರಣೆ ಮಾಡುತ್ತಿದ್ದಾರೆ. ಇವರಿಗೆ ಮುಂದಿನ ದಿನಗಳಲ್ಲಿ ದೇಶದ ಜನರು ತಕ್ಕ ಪಾಠ ಕಲಿಸುವುದರಲ್ಲಿ ಯಾವುದೇ ರೀತಿಯಿಂದ ಅನುಮಾನವೇ ಇಲ್ಲ ಎಂದು ಹೇಳಿದರು.

# ದೇಶವ್ಯಾಪಿ ಕಾರ್ಮಿಕ ಹೋರಾಟಕ್ಕೆ ಕರೆ:
## ವಿಜಯಪುರದಲ್ಲಿ ಸಿಐಟಿಯು ಪ್ರತಿಭಟನೆ



ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ, ಏ.18-** ಕಾರ್ಮಿಕರ ಹಕ್ಕುಗಳ ಪರವಾಗಿ ದೇಶವ್ಯಾಪಿ ಹೋರಾಟಕ್ಕೆ ಕರೆ ನೀಡಿರುವ ಸಿಐಟಿಯು, ಏ.18ರಂದು ಕ್ರಮ ಕೈಗೊಳ'ಳ್ಳುವುದಾಗಿ ಘೋಷಿಸಿದೆ. ಇದರ ಅಂಗವಾಗಿ ಇಂದು ವಿಜಯಪುರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಿಐಟಿಯು ರಾಜ್ಯ ಸಮಿತಿ ಉಪಾಧ್ಯಕ್ಷ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಆರ್.ಎಸ್. ಬಸವರಾಜ್, ಉತ್ತರ ಪ್ರದೇಶ ಮತ್ತು ಹರಿಯಾಣ ರಾಜ್ಯಗಳಲ್ಲಿ ಬಿಜೆಪಿ ನೇತೃತ್ವದ ಸರ್ಕಾರಗಳು ಕಾರ್ಮಿಕರ ಹೋರಾಟಗಳನ್ನು ಕ್ರೂರವಾಗಿ ದಮನಿಸುತ್ತಿರುವುದನ್ನು ತೀವ್ರವಾಗಿ ಖಂಡಿಸಿದರು. ನೋಯಿಡಾ, ಗ್ರೇಟರ್ ನೋಯಿಡಾ, ಗುರುಗ್ರಾಮ ಸೇರಿದಂತೆ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ನಡೆಯುತ್ತಿರುವ ಘಟನೆಗಳು ಕೇವಲ ಕೈಗಾರಿಕಾ ವಿವಾದವಲ್ಲ, ನೇರ ವರ್ಗ ಸಂಘರ್ಷದ ಪ್ರತಿಬಿಂಬವಾಗಿವೆ ಎಂದು ಹೇಳಿದರು. ಸರ್ಕಾರದ ಯಂತ್ರಾಂಗವು ಕಾರ್ಪೊರೇಟ್ ಹಿತಾಸಕ್ತಿಗಳನ್ನು ರಕ್ಷಿಸಲು ಕಾರ್ಮಿಕರ ಹಕ್ಕುಗಳನ್ನು ಕುಗ್ಗಿಸುತ್ತಿದೆ ಎಂದು ಆರೋಪಿಸಿದರು.

ಸಿಐಟಿಯು ಸಂಚಾಲಕರಾದ ಲಕ್ಷ್ಮಣ ಹಂದ್ರಾಳ್ ಮಾತನಾಡಿ, ಏಪ್ರಿಲ್ 9ರಂದು ನೋಯಿಡಾ ಫೇಸ್-2ರಲ್ಲಿ ಆರಂಭವಾದ ಹೋರಾಟವು ವೇಗವಾಗಿ ವಿಸ್ತರಿಸಿಕೊಂಡಿದ್ದು, ಸುಮಾರು 40 ರಿಂದ 50 ಸಾವಿರ ಕಾರ್ಮಿಕರನ್ನು ಒಳಗೊಂಡಂತೆ ಎನ್'ಸಿಆರ್'ನ ಪ್ರಮುಖ ಕೈಗಾರಿಕಾ ವಲಯಗಳಿಗೆ ಹರಡಿದೆ ಎಂದು ಹೇಳಿದರು. ಬರೌನಿ, ಪಾಣಿಪತ್, ಸೂರತ್ ಸೇರಿದಂತೆ ವಿವಿಧ ಕೈಗಾರಿಕಾ ಕೇಂದ್ರಗಳ ಹೋರಾಟಗಳ ಮುಂದುವರಿಕೆಯಾಗಿ ಇದು ಬೆಳೆಯುತ್ತಿದೆ ಎಂದರು.

ಕಾರ್ಮಿಕರು ಗುತ್ತಿಗೆ ಪದ್ಧತಿ, ಕಡಿಮೆ ವೇತನ, ಅಮಾನವೀಯ ಕೆಲಸದ ಪರಿಸ್ಥಿತಿಗಳು ಹಾಗೂ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಏಕೀಕೃತ ಹೋರಾಟ ನಡೆಸುತ್ತಿರುವುದಾಗಿ ತಿಳಿಸಿದರು. ತಿಂಗಳಿಗೆ ಕನಿಷ್ಠ 26,000 ವೇತನದ ಬೇಡಿಕೆ ಅವಶ್ಯಕತೆಯಾಗಿದೆ ಎಂದು ಹೇಳಿದರು. ದೀರ್ಘಕಾಲದಿಂದ ವೇತನ ಪರಿಷ್ಕರಣೆ ಆಗದಿರುವುದು ಹಾಗೂ ಬೆಲೆ ಏರಿಕೆಯ ಪರಿಣಾಮವಾಗಿ ಈ ಹೋರಾಟ ತೀವ್ರಗೊಂಡಿದೆ ಎಂದರು.

ಈ ಸಂದರ್ಭದಲ್ಲಿ ಅಂಗನವಾಡಿ, ಬಿಸಿಯೂಟ, ಗ್ರಾಮ ಪಂಚಾಯಿತಿ ಹಾಗೂ ಕಟ್ಟಡ ಕಾರ್ಮಿಕ ಸಂಘಟನೆಗಳ ಮುಖಂಡರುಗಳಾದ ಸುನಂದ ನಾಯಕ್, ಭಾರತಿ ವಾಲಿ, ಸುಮಂಗಲ ಆನಂದ್ ಶೆಟ್ಟಿ, ಕಾಳಮ್ಮ ಬಡಿಗೇರ್, ಲಾಲಮ್ಮದ್ ಶೇಕ್, ಶಿವಾನಂದ ಅನಿಮಿ, ಶಿವಾನಂದ ಬಿರಾ ದಾರ್, ಸುರೇಖಾ ವಾಗ್ಮೊರೆ, ಭಾರತಿ ಮಠ ಪತಿ, ಈರಣ್ಣ ಬೆಳ್ಳುಂಡಗಿ, ಅಣ್ಣಾರಾಯ ಈಳಿಗೇರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಏ.20ರಂದು ಬಸವ ಜಯಂತಿ

ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ,ಏ.18-** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಬಸವ ಜಯಂತಿ ಆಚರಣೆಯನ್ನು ಏ.20ರಂದು ಸಂಜೆ 5 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ನಗರದ ಬಸವೇಶ್ವರ ವೃತ್ತದಲ್ಲಿರುವ ವಿಶ್ವಗುರು ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಹಾಗೂ ಅಂದು ಸಂಜೆ 4ಗಂಟೆಗೆ ಭಾವಚಿತ್ರದ ಮೆರವಣಿಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಪ್ರಮುಖ ವೃತ್ತಗಳ ಮೂಲಕ ಸಾಗಿ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರವರೆಗೆ ಜರುಗಲಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ ಎನ್, ನವದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ2 ಹಾಗೂ ಶಾಸಕರಾದ ಪ್ರಕಾಶ ಬಿ. ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್. ನಾಡಗೌಡ, ಸಂಸದರಾದ ರಮೇಶ ಜಗಜಿಣಗಿ ಹಾಗೂ ಸುಧಾ ಮೂರ್ತಿ, ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಬಿ.ಎಸ್.ಕವಲಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್. ಪೂಜಾರ, ಕೇಶವ ಪ್ರಸಾದ ಎಸ್,

ಮಹಾನಗರ ಪಾಲಿಕೆಯ ಮಹಾಪೌರರಾದ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಗಂಗಾಧರ ಎಸ್ ಸಂಬಣ್ಣಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಅವರು ಭಾಗವಹಿಸಲಿದ್ದಾರೆ.

ಪ್ರೊ. ಎಚ್. ಟಿ.ಪೋತೆ ವಿಶೇಷ ಉಪನ್ಯಾಸ ನೀಡಲಿದ್ದು, ಶ್ರೀಮತಿ ಶ್ರೀದೇವಿ ಭಂಡಾರಿಕರ ಸುಗಮ ಸಂಗೀತ ನಡೆಸಿಕೊಡಲಿದ್ದಾರೆ.

ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಸಾರ್ವಜನಿಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಗಣ್ಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ...ಮೊದಲನೇ ಪುಟದಿಂದ

## ಕುಡಿಯುವ ನೀರಿನ ಮೂಲಗಳ ಪರೀಕ್ಷೆಗೆ ಆದ್ಯತೆ ನೀಡಿ: ಈಶ್ವರ ಕುಮಾರ್ ಕಾಂದೂ

ಛತ್ರಿ, ಕುಡಿಯುವ ನೀರು ಇರುವಂತೆ ಸಾರ್ವಜನಿಕರಿಗೆ ಗುಂಪು ಸಭೆ, ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಹಾಗೂ ತುರ್ತು ಸಂದರ್ಭ ಎದುರಿಸಲು ತಾಲೂಕಾ ಆಸ್ಪತ್ರೆಗಳಲ್ಲಿ 5 ಐಸಿಯು ಬೆಡ್‌ಗಳ ವಾರ್ಡ್ ಸಿದ್ದಪಡಿಸಲು ತಿಳಿಸಿದರು.

ನೀರಿನ ಮೂಲಗಳ ಪರೀಕ್ಷೆ ಹಾಗೂ ಸುರಕ್ಷಿತ ಆಹಾರ ಸೇವನೆಗೆ ಜಾಗೃತಿ ; ಬೇಸಿಗೆಯ ಹಿನ್ನಲೆಯಲ್ಲಿ ನೀರಿನ ಮೂಲಗಳನ್ನು ನಿಯಮಿತವಾಗಿ ಪರೀಕ್ಷೆ ಹಾಗೂ ಅಸುರಕ್ಷಿತವೆಂದು ಕಂಡು ಬರುವ ಮೂಲಗಳನ್ನು ನಿಯಮಾನುಸಾರ ಕ್ಲೋರಿನೇಷನ್ ಮಾಡಿಸಲು ಎಲ್ಲ ಗ್ರಾಮ ಪಂಚಾಯತಗಳು, ಸ್ಥಳೀಯ ಸಂಸ್ಥೆಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಯಾವುದೇ ಅವಘಡ ಸಂಭವಿಸಿದಂತೆ ಹಾಗೂ ಮುಂಜಾಗೃತಾ ಕ್ರಮಗಳ ಬಗ್ಗೆ ಜನಜಾಗೃತಿ ನೀಡಲು ಹಾಗೂ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವನೆ ಬಗ್ಗೆ ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಲು ವ್ಯಾಪಕ ಪ್ರಚಾರ ಕೈಗೊಳ್ಳಲು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ಮಾಹಿತಿ ನೀಡುತ್ತಾ, ಈಗಾಗಲೆ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಓಆರ್‌ಎಸ್ ಪೊಟ್ಟಣ ಹಾಗೂ ತುರ್ತು ಔಷಧಿಗಳನ್ನು ದಾಸ್ತಾನು ಮಾಡಲಾಗಿದೆ, ತುರ್ತು ಸಂದರ್ಭದಲ್ಲಿ 108 ಕ್ಕೆ ಕರೆ ಮಾಡಿ ???ಂಬ್ಯುಲೆನ್ಸ್‌ನ ಸದುಪಯೋಗಕ್ಕಾಗಿ ನಿರಂತರ ಜಾಗೃತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ ವಿಜಯಶಂಕರ್, ಉಪನಿರ್ದೇಶಕರು, ಡಬ್ಲ್ಯುಸಿಡಿ ಇಲಾಖೆ ನವೀನ್‌ಕುಮಾರ್, ಜಿಲ್ಲಾ ಆಯುಷ್ ಅಧಿಕಾರಿ ಡಾ ಶಂಕರ್‌ಗೌಡ, ಡಿಪಿಡಿಓ ಡಾ ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್. ಎನ್. ಡಿಎಸ್‌ಓ ಹಾಗೂ ಡಿಪಿಎಮ್‌ಓ ಡಾ ಗಣೇಶ್ ಕೆ, ಎನ್‌ಪೋರ್ಸ್‌ಮೆಂಟ್ ಅಧಿಕಾರಿ ಡಾ ಶಿವಕುಮಾರ್ ನಾರಾ, ಡಿಟಿಓ ಡಾ ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ನಿರೂಪಣಾಧಿಕಾರಿ ಡಾ ಕುಮಾರ್ ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿ, ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ವ್ಯವಸ್ಥಿತವಾಗಿ ನಿರ್ವಹಣೆಗೆ ಅಪರ ಜಿಲ್ಲಾಧಿಕಾರಿ ಸೂಚನೆ

ಗೋಡೆ ಮೇಲೆ ಗಡಿಯಾರ ಹಾಕಬೇಕು. ಪ್ರತಿ ಕೊಠಡಿಯಲ್ಲಿ 24 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪಿಠೋಪಕರಣ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಸಿಇಟಿ ಕೋರ್ಸ್‌ಗಳ ಪ್ರವೇಶಾತಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಪೊಲೀಸ್ ಇಲಾಖೆಯಿಂದ ಸಂಪೂರ್ಣ ಭದ್ರತೆ ಹಾಗೂ ಸಹಕಾರ ನೀಡಲಾಗುವುದು ಎಂದರು.

6,564 ಅಭ್ಯರ್ಥಿಗಳು ನೋಂದಣಿ: ಜಿಲ್ಲೆಯಲ್ಲಿ ಇದೇ ಏಪ್ರಿಲ್ 23 ಹಾಗೂ 24ರಂದು ವೃತ್ತಿಪರ ಕೋರ್ಸಗಳ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಾಗಿ ರಾಯಚೂರು ನಗರದಲ್ಲಿ 19ಕೇಂದ್ರಗಳನ್ನು ಗುರುತಿಸಲಾಗಿದೆ. ಪರೀಕ್ಷೆಗೆ 6564 ಅಭ್ಯರ್ಥಿಗಳಿಂದ ನೋಂದಣಿಯನ್ನು ಮಾಡಲಾಗಿದೆ. ಏಪ್ರಿಲ್ 23ರ ಬೆಳಿಗ್ಗೆ 10.30ರಿಂದ 11.50ರವರೆಗೆ ಭೌತಶಾಸ್ತ್ರ ಹಾಗೂ ಮಧ್ಯಾಹ್ನ 2.30ರಿಂದ 3.50ರವರಗೆ ರಸಾಯನ ಶಾಸ್ತ್ರ ಪರೀಕ್ಷೆ ನಡೆಯಲಿದೆ. ಏಪ್ರಿಲ್ 24ರ ಬೆಳಿಗ್ಗ 10.30ರಿಂದ 11.50ರವರೆಗೆ ಗಣಿತ ಶಾಸ್ತ್ರ, ಹಾಗೂ ಮಧ್ಯಾಹ್ನ 2.30ರಿಂದ 3.50ರವರಗೆ ಜೀವಶಾಸ್ತ್ರ ಪರೀಕ್ಷೆ ನಡೆಯಲಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರ ಹೊಕ್ರಾಣಿ ಅವರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ ಸೇರಿದಂತೆ ಜಿಲ್ಲೆಯ ವಿವಿಧ ಕಾಲೇಜಿನ ಪ್ರಾಂಶುಪಾಲರು, ವೃತ್ತಿಪರ ಕೋರ್ಸಗಳ ಸಾಮಾನ್ಯ ಪ್ರವೇಶ ಪರೀಕ್ಷೆಯ ಕೊಠಡಿ ಮೇಲ್ವಿಚಾರಕರು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ರಂಜಿತ್ ಪ್ಯಾಲೇಸ್‌ನಲ್ಲಿ ಅಗ್ನಿ ಅವಘಡ ಶಾರ್ಟ ಸರ್ಕೂಟ್‌ನಿಂದ ಆತಂಕ ಸೃಷ್ಟಿ

ದೊಡ್ಡ ಪ್ರಮಾಣದ ಆಸ್ತಿಪಾಸ್ತಿಗೆ ನಷ್ಟ ಉಂಟಾಗಿಲ್ಲ. ಶಾರ್ಟ್ ಸರ್ಕ್ಯೂಟ್‌ನಿಂದಲೇ ಬೆಂಕಿ ಕಾಣಿಸಿಕೊಂಡಿರುವುದಾಗಿ ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ. ಸಂಬಂಧಪಟ್ಟ ಅಧಿಕಾರಿಗಳು ಘಟನೆಯ ಕುರಿತು ಹೆಚ್ಚಿನ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಪಶ್ಚಿಮ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

## ದೇವದುರ್ಗದ ಕೊಳೂರು ಗ್ರಾಮದಲ್ಲಿ ಬಸವೇಶ್ವರ ಜಯಂತಿ, ಮೈಲಾರಲಿಂಗೇಶ್ವರ ಜಾತ್ರೆ ಅಂಗವಾಗಿ ರಾಜ್ಯ ಮಟ್ಟದ ಎತ್ತುಗಳ ಕಲ್ಲೆಳೆಯುವ ಸ್ಪರ್ಧೆ- ರಾಚಣ್ಣ ನಾಯಕ

ಸ್ವಾಮಿ, ಹೇಮನಾಳದ ಶ್ರೀ ದಾನಯ್ಯ ತಾತ, ಅರಿಕೇರಿಯ ಬಸವರಾಜ ಪೂಜಾರಿ ಜ್ಯೋತಿ ಬೆಳಗಿಸಲಿದ್ದಾರೆ. ಕಾರ್ಯಕ್ರಮವನ್ನು ಮಾಜಿ ಸಚಿವ ಕೆ.ಶಿವನಗೌಡ ನಾಯಕ ಉದ್ಘಾಟಿಸಲಿದ್ದಾರೆ. ಮಾಜಿ ಸಂಸದ ಬಿ.ವಿ.ನಾಯಕ, ಶಾಸಕಿ ಜಿ.ಕರೆಮ್ಮನಾಯಕ, ವೆಂಕಟೇಶ ಗಲಗ ಆಗಮಿಸಲಿದ್ದಾರೆ.

21 ರಂದು ಎತ್ತುಗಳ ಸ್ಪರ್ಧೆಗೆ ನವಲಿಗುಡ್ಡದ ನಿವೃತ್ತ ತಹಸೀಲ್ದಾರ ವೆಂಕನಗೌಡ ಆರ್.ಪಾಟೀಲ್ ಉದ್ಘಾಟಿಸಲಿದ್ದಾರೆ. ಟಿಎಪಿಎಂಸಿ ಅಧ್ಯಕ್ಷ ಶರಣಗೌಡ ಮಾಲಿ ಪಾಟೀಲ್, ಭೀಮರಾಯ ಹದ್ದಿನಾಳ, ಕೂಡ್ಲಗಯ್ಯ, ಎಂ.ನಾಗರೆಡ್ಡಿ ನಾಯಕ, ಬಸವಲಿಂಗಪ್ಪ ಕಾಕರಗಲ್, ಎನ್.ರಘುವೀರ ನಾಯಕ ಅಧ್ಯಕ್ಷತೆವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅರಣ್ಯ ಅಧಿಕಾರಿ ರಾಜೇಶ ನಾಯಕ, ಡಾ.ಸಾಬಣ್ಣನಾಗಡದಿನ್ನಿ, ಮಾನಸ ಯ್ಯ ನಾಯಕ, ಅಂಬಣ್ಣನಾಯಕ, ಬಸವರಾಜ, ಮಹಾದೇವ , ವೆಂಕಟೇಶ ಮದರಕಲ್, ಮೂರ್ತಿ ಹೇಮನಾಳ, ಶಿವರಾಜ ಫತ್ತೇಪೂರು, ಭೀಮರೆಡ್ಡಿ ಮದರಕಲ್, ರವಿಗೌಡ ಮಾತ್ಪಳ್ಳಿ, ಅರುಣುಕುಮಾರ ರಾಠೋಡ ಪಿಎಸ್ಐ ಮಂಜುನಾಥ ಗಬ್ಬೂರು, ಪಿಡಿಓ ಫಯಾಜ್ ಖಾನ್, ನಾಗರಾಜ ಮಲ್ಲೇದೇರರ ಗುಡ್ಡ, ಸಣ್ಣ ಈರೇಶ ಪಿಎಸ್ಐ, ಬಸವರಾಜ ಪಿಎಐ ಸೇರಿ ಅನೇಕ ವಿವಿಧ ಗ್ರಾಮಗಳ ಮುಖಂಡರು ಭಾಗವಹಿಸಲಿದ್ದಾರೆ. ಈ ಸಂದರ್ಬದಲ್ಲಿ ಮಲ್ಲಣ್ಣ ಗುರಿಕಾರ, ಶಿವು ಕೋಳೂರು ಉಪಸ್ಥಿತರಿದ್ದರು.

## ಮಹಿಳಾ ಮೀಸಲಾತಿ ಮಸೂದೆ ಸೋಲು ಕೇಂದ್ರದ ತುಘ್ಲಕ್ ಆಡಳಿತಕ್ಕೆ ಹೊಡೆತ-ಡಾ. ರಝಾಕ್ ಉಸ್ತಾದ್

ಮಹಿಳಾ ಮೀಸಲಾತಿ ವಿರುದ್ಧ ನಡೆದ ಬೆಳವಣಿಗೆಯಲ್ಲ ಇದು, ಬದಲಾಗಿ ಕೇಂದ್ರ ಸರ್ಕಾರದ ತುಘ್ಲಕ್ ಹಾಗೂ ನಿರಂಕುಶ ಆಡಳಿತಕ್ಕೆ ಬಂದಿರುವ ಸೋಲು ಎಂದು ಅವರು ಅಭಿಪ್ರಾಯಪಟ್ಟರು.

2023ರಲ್ಲಿ ಅಂಗೀಕೃತವಾದ ಮಹಿಳಾ ಮೀಸಲಾತಿ ಕಾಯ್ದೆಗೆ ರಾಷ್ಟ್ರಪತಿ ಅಂಕಿತ ದೊರೆತರೂ, ಮೂರು ವರ್ಷಗಳಾದರೂ ಗೆಜೆಟ್ ಅಧಿಸೂಚನೆ ಹೊರಡಿಸದಿರುವುದು ಬಿಜೆಪಿಯ ಮಹಿಳಾ ಮೀಸಲಾತಿ ಬಗ್ಗೆ ಇರುವ ನಿಜವಾದ ಕಾಳಜಿಯನ್ನು ಬಹಿರಂಗಪಡಿಸುತ್ತದೆ ಎಂದು ಟೀಕಿಸಿದರು.

2026ರ ಏಪ್ರಿಲ್ 16ರಂದು ಅಧಿಸೂಚನೆ ಹೊರಡಿಸುವುದಾಗಿ ಹೇಳುತ್ತಿರುವ ಕೇಂದ್ರ ಸರ್ಕಾರ, ಈ ಮೂರು ವರ್ಷಗಳಲ್ಲಿ ಯಾವ ರಾಜಕೀಯ ಲೆಕ್ಕಾಚಾರ ಮಾಡಿಕೊಂಡಿತು ಎಂಬುದನ್ನು ಜನತೆಗೆ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಮಹಿಳಾ ಮೀಸಲಾತಿ ಕಾಯ್ದೆಯ ಪ್ರಕಾರ 33 ಶೇಕಡಾ ಮೀಸಲಾತಿಯನ್ನು 2026ರ ಜನಗಣತಿ ನಂತರ ಕ್ಷೇತ್ರಗಳ ಪುನರ್ವಿಂಗಡಣೆಯೊಂದಿಗೆ 2029ರಿಂದ ಜಾರಿಗೊಳಿಸಲಾಗುತ್ತದೆ. ಆದರೆ ಈಗ ಏಕಾಏಕಿ 2011ರ ಜನಗಣತಿಯ ಆಧಾರದಲ್ಲಿ ಮೀಸಲಾತಿ ಜಾರಿಗೊಳಿಸುವುದಾಗಿ ಹೇಳುವುದು ಗೊಂದಲ ಸೃಷ್ಟಿಸುವ ಕ್ರಮವಾಗಿದೆ ಎಂದರು.

ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು 850ಕ್ಕೆ ಹೆಚ್ಚಿಸುವ ಪ್ರಸ್ತಾಪದ ಹಿಂದೆ ದಕ್ಷಿಣ ಭಾರತಕ್ಕೆ ಅನ್ಯಾಯ ಮಾಡುವ ಉದ್ದೇಶವಿದೆ ಎಂದು ಆರೋಪಿಸಿದರು.

ಈ ಬೆಳವಣಿಗೆಯಿಂದ ಮಹಿಳಾ ಮೀಸಲಾತಿಗೆ ಯಾವುದೇ ಧಕ್ಕೆ ಇಲ್ಲ, ಅದು 2029ರಿಂದ ಜಾರಿಯಾಗಲೇಬೇಕು. ವಿರೋಧ ಪಕ್ಷಗಳು ಮಹಿಳಾ ಮೀಸಲಾತಿಗೆ ವಿರೋಧಿಸಿಲ್ಲ, ಅಸಮರ್ಪಕ ಕ್ಷೇತ್ರಗಳ ಪುನರ್ವಿಂಗಡಣೆ ಪ್ರಕ್ರಿಯೆಗೆ ಮಾತ್ರ ವಿರೋಧ ವ್ಯಕ್ತಪಡಿಸಿದ್ದವು ಎಂದು ಸ್ಪಷ್ಟಪಡಿಸಿದರು.

ಬಿಜೆಪಿ ಸರ್ಕಾರ ಎಲ್ಲವನ್ನೂ ರಾಜಕೀಯ ಲಾಭದ ಲೆಕ್ಕಾಚಾರದಲ್ಲಿಯೇ ನೋಡುತ್ತಿದ್ದು, 2024ರ ಲೋಕಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಈ ರೀತಿಯ ಕ್ರಮ ಕೈಗೊಂಡಿದೆ ಎಂದು ದೂರಿದರು.

## ಮತದಾರರ ಪಟ್ಟಿ ಸರಿಪಡಿಸಲು ಸೂಚನೆ ಹೋರಾಟಕ್ಕೆ ಸಂದ ಜಯ-ಮಹಾಂತೇಶ ಬಿರಾದಾರ

ಬೆಂಗಳೂರು ಹೈಕೋರ್ಟ ಅಪೂರ್ಣ, ಅಸಮರ್ಪಕವಾಗಿರುವ ಚುನಾವಣೆ ಪ್ರಕ್ರಿಯೆಗಳಿಗೆ ತಡೆಯಾಜ್ಞೆ ನೀಡಿ ಮತದಾರ ಪಟ್ಟಿ ಸೇರ್ಪಡೆ ನಂತರ ಚುನಾವಣೆ ನಡೆಸಲು ಸೂಚಿಸಿದೆ ನನ್ನ ಮತ್ತು ನನ್ನ ಪತ್ನಿ ಪರಿಮಳ ಇವರ ಸೇರು ಮತದಾರರ ಪಟ್ಟಿಗೆ ಸೇರಿಸಲು ಆದೇಶಿಸಲಾಗಿದೆ. ಚುನಾವಣಾಧಿಕಾರಿಗಳು ಕೂಡಲೇ ಮತದಾರರ ಪಟ್ಟಿ ಸೇರ್ಪಡೆಮಾಡಿ ಚುನಾವಣೆ ಪ್ರಕ್ರಿಯೆಗಳು ನಡೆಸಬೇಕಿದೆ. ತಾಲೂಕ ಅಧ್ಯಕ್ಷರಿಗೆ ಮತದಾರರ ಪಟ್ಟಿ ಸೇರಿಸುವ ಅಧಿಕಾರವಿದ್ದರೂ ದುರುದ್ದೇಶ ಪೂರಕವಾಗಿ ಮತದಾರರ ಪಟ್ಟಿಯಿಂದ ಕೈ ಬಿಡಲಾಗಿತ್ತು. ಹೈಕೋರ್ಟ ಆದೇಶ ಮೇರೆಗೆ ಚುನಾವಣೆ ಭಾಗವಹಿಸಲು ಸಹ ಅವಕಾಶ ದೊರೆತಿದೆ ಎಂದರು. ಈ ಸಂದರ್ಬದಲ್ಲಿ ಭೀಮರಾಯ, ಹನುಮಂತಪ್ಪ ಗಧಾರ, ಕೃಷ್ಣಾಜಿ ಕುಲ್ಕರ್ಣಿ, ವಿರೇಶ, ಸಂತೋಷ ನಂದಿನಿ ಇದ್ದರು.

# ನಕಲಿ ಜಾತಿ ಪ್ರಮಾಣಪತ್ರ ಪಡೆದು ಚುನಾವಣೆಗೆ ಸ್ಪರ್ಧೆ ಆರೋಪ ಶಾಸಕ ಕೊತ್ತೂರು ಮಂಜುನಾಥ್ ವಿರುದ್ಧ ತನಿಖೆಗೆ ಹೈಕೋರ್ಟ್ ಅನುಮತಿ






**ಬೆಂಗಳೂರು,ಏ.18-** ನಕಲಿ ಜಾತಿ ಪ್ರಮಾಣಪತ್ರ ಕುರಿತ ಕಾನೂನು ಹೋರಾಟದಲ್ಲಿ ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಅವರ್ಗೆ ಹೈಕೋರ್ಟ್‌ನಲ್ಲಿ ಮತ್ತೆ ಹಿನ್ನಡೆಯಾಗಿದೆ.

ತಮಗೆ ನೀಡಿದ್ದ ಎಸ್‌ಸಿ ಜಾತಿ ಪ್ರಮಾಣಪತ್ರ ಸಿಂಧುವಾಗಿದೆ ಮತ್ತು ಜಾತಿ ಪ್ರಮಾಣಪತ್ರ ರದ್ದುಗೊಳಿಸಿದ್ದ ಏಕ ಸದಸ್ಯಪೀಠದ ಆದೇಶ ಪ್ರಶ್ನಿಸಿ ಮಂಜುನಾಥ್ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ.

ಇದರಿಂದಾಗಿ ಏಕ ಸದಸ್ಯ ಪೀಠದ ಆದೇಶದಂತೆ ಇದೀಗ ಮಂಜುನಾಥ್, ನಕಲಿ ಜಾತಿ ಪ್ರಮಾಣಪತ್ರ ಪಡೆದುಕೊಂಡಿರುವ ಬಗ್ಗೆ ತನಿಖೆಯನ್ನು ಎದುರಿಸ ಬೇಕಾಗಿದೆ.

ಅರ್ಜಿದಾರರ ವಿರುದ್ಧ ನಕಲಿ ಜಾತಿ ಪ್ರಮಾಣ ಪತ್ರ ಪಡೆದಿದ್ದಾರೆಂಬ ಗಂಭೀರ ಆರೋಪವಿದೆ. ಅವರು 2008ರಲ್ಲಿ ಜಾತಿ ಪ್ರಮಾಣಪತ್ರ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಲಾಗಿತ್ತು. ಆ ನಂತರ ಅರ್ಜಿದಾರರು ಅದರ ವಿರುದ್ಧ ಸಲ್ಲಿಸಿದ್ದ ಮೇಲ್ಮನವಿಯೂ ಸಹ ವಜಾಗೊಂಡಿದೆ. ಅಷ್ಟಕ್ಕೆ ಸುಮ್ಮನಾಗದೆ ಅರ್ಜಿದಾರರು 2012ರ ಏ.3ರಂದು ಎಸ್‌ಸಿ ಜಾತಿ ಪ್ರಮಾಣಪತ್ರ ಪಡೆದುಕೊಂಡಿದ್ದಾರೆ ಎಂದು ಪೀಠ ತನ್ನ ಆದೇಶದಲ್ಲಿ ವಿವರಿಸಿದೆ.

ಅಲ್ಲದೆ, ಸ್ಥಳೀಯ ತಹಶಿಲ್ದಾರ್ ಕಚೇರಿಯ ಕಂಪ್ಯೂಟರ್ ಅನ್ನು ದುರುಪಯೋಗಪಡಿಸಿಕೊಂಡು ನಕಲಿ ಜಾತಿ ಪ್ರಮಾಣಪತ್ರ ಪಡೆದುಕೊಳ್ಳಲಾಗಿದೆ. ಆ ಜಾತಿ ಪ್ರಮಾಣಪತ್ರ ವಿತರಣೆಯ ಯಾವ ದಾಖಲೆಗಳೂ ತಮ್ಮ ಬಳಿ ಇಲ್ಲವೆಂದು ಹೇಳಿದ್ದಾರೆ. ಹಾಗಾಗಿ ಏಕ ಸದಸ್ಯ ಪೀಠ ಆದೇಶ ನೀಡಿರುವಂತೆ, ರಾಜ್ಯ ಸರ್ಕಾರ ಆ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕು ಎಂದು ತಿಳಿಸಿರುವ ನ್ಯಾಯಪೀಠ, ಮೇಲ್ಮನವಿಯನ್ನು ವಜಾಗೊಳಿಸಿದೆ. ಜೊತೆಗೆ ಅರ್ಜಿದಾರರು ಬೇಡ ಜಂಗಮ ಸಮುದಾಯಕ್ಕೆ ಸೇರಿಲ್ಲ, ಅವರು ಬೈರಾಗಿ ಸಮುದಾಯಕ್ಕೆ ಸೇರಿದವರೆಂದು ಹೇಳಲು ಸಾಕಷ್ಟು ದಾಖಲೆಗಳಿವೆ. ಜೊತೆಗೆ ಜಿಲ್ಲಾ ಜಾತಿ ಪರಿಶೀಲನಾ ಸಮಿತಿಯ ದಾಖಲೆಗಳಲ್ಲೂ ಆ ಅಂಶ ವ್ಯಕ್ತವಾಗಿದೆ. ಹಾಗಾಗಿ ಏಕ ಸದಸ್ಯ ಪೀಠ ಆದೇಶ ಸರಿ ಇದ್ದು, ಅದರಲ್ಲಿ ಹಸ್ತಕ್ಷೇಪ ಮಾಡಬೇಕಾದ ಪ್ರಮೇಯವೇ ಇಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ಪ್ರಕರಣದ ಹಿನ್ನೆಲೆ: ತಾವು ಪರಿಶಿಷ್ಟ ಜಾತಿಗಳ ಪಟ್ಟಿಗೆ ಬರುವ ಬುಡುಗ ಜಂಗಮ ಜಾತಿಗೆ ಸೇರಿದವರೆಂದು ಘೋಷಿಸಿಕೊಂಡು ಜಿ.ಮಂಜುನಾಥ್ 2012ರಲ್ಲಿ ಎಸ್‌ಸಿ ಪ್ರಮಾಣ ಪತ್ರ ಪಡೆದು 2013ರಲ್ಲಿ ಮುಳಬಾಗಿಲು ಮೀಸಲು ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆದ್ದಿದ್ದರು. ಪರಾಜಿತ ಅಭ್ಯರ್ಥಿ ಮುನಿನಂಜಪ್ಪ ಜಾತಿ ಪ್ರಮಾಣದ ಸಿಂಧುತ್ವ ಪ್ರಶ್ನಿಸಿದ್ದರು. ಪರಿಶಿಷ್ಟ ಜಾತಿಗೆ ಸೇರಿರುವುದನ್ನು ಸಾಬೀತುಪಡಿಸಲು ವಿಫಲರಾದ ಹಿನ್ನೆಲೆಯಲ್ಲಿ ಅವರ ಆಯ್ಕೆಯನ್ನು ಹೈಕೋರ್ಟ್ 2018ರ ಏಪ್ರಿಲ್‌ನಲ್ಲಿ ಅಸಿಂಧುಗೊಳಿಸಿತ್ತು. ಆ ತೀರ್ಪಿನ ವಿರುದ್ಧ ಅವರು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು.

ಆ ಅರ್ಜಿ ವಜಾಗೊಳಿಸಿದ್ದ ಸುಪ್ರೀಂ ಕೋರ್ಟ್, ಜಿಲ್ಲಾಧಿಕಾರಿಗಳ ನೇತೃತ್ವದ ಜಾತಿ ಪರಿಶೀಲನೆ ಸಮಿತಿಯು ಜಿ. ಮಂಜುನಾಥ್ ಜಾತಿಯನ್ನು ಪರಿಶೀಲಿಸಬೇಕು. ಸಮಿತಿಯ ನಿರ್ಣಯದ ಬಗ್ಗೆ ಆಕ್ಷೇಪವಿದ್ದರೆ ಪುನಃ ಅದನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಬಹುದು ಎಂದು ಆದೇಶಿಸಿತ್ತು.

ಜಿ.ಮಂಜುನಾಥ್ ಬುಡುಗ ಜಂಗಮ ಜಾತಿಗೆ ಸೇರಿಲ್ಲ. ಅವರು ಬೈರಾಗಿ ಜಾತಿಗೆ ಸೇರಿದವರು ಎಂದು ಜಿಲ್ಲಾಧಿಕಾರಿಗಳ ನೇತೃತ್ವದ ಜಾತಿ ಪರಿಶೀಲನಾ ಸಮಿತಿ ನಿರ್ಣಯ ಕೈಗೊಂಡಿತ್ತು. ಬುಡುಗ ಜಂಗಮ ಪರಿಶಿಷ್ಟ ಜಾತಿಯಾದರೆ, ಬೈರಾಗಿ ಒಬಿಸಿ ಪ್ರವರ್ಗ-1ಕ್ಕೆ ಸೇರುತ್ತದೆ. ಸಮಿತಿಯ ನಿರ್ಣಯವನ್ನು ಮಂಜುನಾಥ್ ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ಏಕ ಸದಸ್ಯ ಪೀಠವು ಶಾಸಕ ಮಂಜುನಾಥ್ ಅರ್ಜಿಯನ್ನು ತಿರಸ್ಕರಿಸಿ, ಅವರ ವಿರುದ್ಧ ಕ್ರಮ ಜರುಗಿಸಲು ಸರ್ಕಾರಕ್ಕೆ ಸೂಚಿಸಿತ್ತು.

# ಚಿಕ್ಕಮಗಳೂರು : ಸಿಲಿಂಡರ್ ಸ್ಫೋಟಕ್ಕೆ ಮನೆ ಸಂಪೂರ್ಣ ಛಿದ್ರ ಛಿದ್ರ-ಸಿಸಿಟಿವಿ ಕ್ಯಾಮರಾದಲ್ಲಿ ದೃಶ್ಯ ಸೆರೆ



**ಚಿಕ್ಕಮಗಳೂರು,ಏ.19-**ಜಿಲ್ಲೆಯ ತರೀಕೆರೆ ತಾಲೂಕಿನ ಇಟ್ಟಿಗೆ ಗ್ರಾಮದಲ್ಲಿ ಬಿಸಿಲಿನ ತಾಪಮಾನಕ್ಕೆ ಶೀಟ್ ಮನೆಯೊಳಗೆ ಗ್ಯಾಸ್ ಸಿಲಿಂಡರ್ ಬ್ಲಾಸ್ಟ್ ಆಗಿರುವ ಘಟನೆ ನಡೆದಿದೆ. ಸ್ಫೋಟದ ತೀವ್ರತೆಗೆ ಮನೆಯ ಮೇಲ್ಛಾವಣಿ ಹಾಗೂ ಮನೆಯಲ್ಲಿರುವ ಎಲ್ಲಾ ವಸ್ತುಗಳು ಹಾರಿಹೋಗಿವೆ. ಈ ದೃಶ್ಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ದೃಶ್ಯ ನೋಡಿದರೆ ಒಂದು ಕ್ಷಣ ಎದೆ ನಡುಗಿಸುವಂತಿದೆ.

ಮೋಹನ್ ಕುಮಾರ್ ಎಂಬುವರಿಗೆ ಸೇರಿದ ಮನೆ ಇದಾಗಿದೆ. ಸಿಲಿಂಡರ್ ಸ್ಫೋಟವಾಗುತ್ತಿದ್ದಂತೆ ಬೆಂಕಿ ಮುಗಿಲೆತ್ತರಕ್ಕೆ ಚಾಚಿಕೊಂಡಿತ್ತು. ಮನೆಗೆ ತಗುಲಿದ ಬೆಂಕಿಯನ್ನು ಆರಿಸುತ್ತಿದ್ದಾಗ ಸಿಲಿಂಡರ್ ಸ್ಫೋಟಗೊಂಡಿದ್ದರಿಂದ ಜನರು ಸ್ಥಳದಿಂದ ದಿಕ್ಕಾಪಾಲಾಗಿ ಓಡಿಹೋಗಿದ್ದರು.

ಮೋಹನ್ ಕುಮಾರ್ ಅವರ ಕುಟುಂಬ ನಿನ್ನೆ ಸಂಜೆ ಮನೆಯಿಂದ ಹೊರ ಹೋಗಿದ್ದರು. ಆಗ ಇದ್ದಕ್ಕಿದ್ದಂತೆ ಗ್ಯಾಸ್ ಸ್ಫೋಟ ಸಂಭವಿಸಿದೆ. ಘಟನೆಯ ಬಗ್ಗೆ ತಿಳಿದ ಕೂಡಲೇ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಕುರಿತು ತರೀಕೆರೆ ಪೊಲೀಸ್ ಠಾಣೆಯ ಪೊಲೀಸ್ ಠಾಣಾಧಿಕಾರಿ ಈಟಿವಿ ಭಾರತಕ್ಕೆ ಪ್ರತಿಕ್ರಿಯೆ ನೀಡಿದ್ದು, ಟಿನಿನ್ನೆ ಸಂಜೆ ಜನರು ಹೇಳುವ ಪ್ರಕಾರ ಇದು ಶೀಟ್ ಮನೆಯಾಗಿದ್ದು, ಬಿಸಿಲಿನ ತಾಪಮಾನಕ್ಕೆ ಸಿಲಿಂಡರ್ ಸ್ಫೋಟವಾಗಿದೆ. ಈ ಮನೆಯಲ್ಲಿ ಒಟ್ಟು ಐದು ಜನ ವಾಸ ಮಾಡುತ್ತಿದ್ದರು.

ಗಂಡ, ಹೆಂಡತಿ, ಇಬ್ಬರು ಮಕ್ಕಳು ಹಾಗೂ ಮನೆಯ ಮಾಲೀಕನ ತಾಯಿ ಇದ್ದರು. ಗಂಡ - ಹೆಂಡತಿ ಹಾಗೂ ಮಕ್ಕಳು ಮಂಗಳೂರಿಗೆ ಚಿಕಿತ್ಸೆಗೆಂದು ಆಸ್ಪತ್ರೆಗೆ ತೆರಳಿದ್ದರು. ಮನೆಯಲ್ಲಿ ವಯಸ್ಸಾದ ತಾಯಿ ಮಾತ್ರ ಉಳಿದುಕೊಂಡಿದ್ದರು. ಈ ವೇಳೆ ಗ್ಯಾಸ್ ಸಿಲಿಂಡರ್ ಸೋರಿಕೆ ಆಗುತ್ತಿರುವುದನ್ನು ಗಮನಿಸಿದ ಅವರು, ಮನೆಯಿಂದ ಹೊರ ಬಂದು ಬೇರೆಯವರಿಗೆ ತಿಳಿಸುವ ಹೊತ್ತಿಗೆ ಗ್ಯಾಸ್ ಸಿಲಿಂಡರ್ ಸ್ಫೋಟವಾಗಿದೆ.

ಇದರಿಂದಾಗಿ ಇಡೀ ಮನೆ ಬೆಂಕಿಯಲ್ಲಿ ಹೊತ್ತಿ ಉರಿದಿದೆ. ಈ ಘಟನೆಯಲ್ಲಿ ಸುಮಾರು 10 ಲಕ್ಷಕ್ಕೂ ಅಧಿಕ ಮೌಲ್ಯದ ವಸ್ತುಗಳು ನಾಶವಾಗಿವೆ. ಮನೆ ಸಂಪೂರ್ಣ ಸುಟ್ಟು ಕರಕಲಾಗಿದೆ ಎಂದು ಮನೆಯ ಮಾಲೀಕ ಮೋಹನ್ ಕುಮಾರ್ ಪ್ರಕರಣವನ್ನು ದಾಖಲು ಮಾಡಿದ್ದಾರೆಟಿ ಎಂದು ಠಾಣಾಧಿಕಾರಿ ಮಾಹಿತಿ ನೀಡಿದ್ದಾರೆ.

ಕೋಟ್ಯಂತರ ಮೌಲ್ಯದ ವಸ್ತುಗಳು ಬೆಂಕಿಗಾಹುತಿ (ನೆಲಮಂಗಲ) : ತಾಲೂಕಿನ ಅಡಕಮಾರನಹಳ್ಳಿಯ ಆಂಜನೇಯ ದೇವಸ್ಥಾನದ ಬಳಿ ಇರುವ ಬೃಹತ್ ಆಹಾರ ಗೋದಾಮಿಗೆ ಇತ್ತೀಚಿಗೆ ರಾತ್ರಿ 10 ಗಂಟೆ ವೇಳೆಗೆ ಬೆಂಕಿ ಬಿದ್ದಿದ್ದು, ಅಪಾರ ಪ್ರಮಾಣದ ವಸ್ತುಗಳು ಬೆಂಕಿಗಾಹುತಿಯಾಗಿದ್ದವು. ಆಹಾರ ಗೋದಾಮಿನಲ್ಲಿ ಅಡುಗೆ ಎಣ್ಣೆ ಸೇರಿದಂತೆ ವಿವಿಧ ಆಹಾರ ಪದಾರ್ಥಗಳನ್ನು ಶೇಖರಣೆ ಮಾಡಲಾಗಿತ್ತು. ಕ್ಷಣದಲ್ಲೇ ಬೆಂಕಿ ಇಡೀ ಗೋದಾಮನ್ನು ಆವರಿಸಿತ್ತು. ಗೋದಾಮಿನಲ್ಲಿ ಕಾರ್ಮಿಕರು ಇರಲಿಲ್ಲ. ಇದರಿಂದ ಯಾವುದೇ ಪ್ರಾಣಪಾಯ ಸಂಭವಿಸಿರಲಿಲ್ಲ.

# ಮಹಿಳಾ ಮೀಸಲಾತಿಗೂ ಡಿಲಿಮಿಟೇಷನ್‌ಗೂ ಸಂಬಂಧವೇ ಇಲ್ಲ, ಬಿಜೆಪಿಯ ಹುನ್ನಾರಕ್ಕೆ ಸೋಲಾಗಿದೆ: ಸಚಿವ ಗುಂಡೂರಾವ್

**ಮಂಗಳೂರು(ದಕ್ಷಿಣ ಕನ್ನಡ),ಏ.19-** ಕೇಂದ್ರ ಸರ್ಕಾರ ಮಹಿಳೆಯರ ಹೆಸರಿನಲ್ಲಿ ವಂಚನೆ ಮಾಡಲು ಹೊರಟಿದೆ. ವಿಶೇಷ ಅಧಿವೇಶನ ಕರೆದು ಆದ ಮುಖಭಂಗಕ್ಕೆ ಅವರೇ ಕಾರಣ. ಮಹಿಳಾ ಮೀಸಲಾತಿಗೆ ಯಾರದ್ದೂ ವಿರೋಧವಿಲ್ಲ. ಆದರೆ ಮಹಿಳೆಯರಿಗೆ ನಿಜವಾಗಿಯೂ ವಿರೋಧ ಮಾಡಿದವರು ಬಿಜೆಪಿಯವರು ಎಂದು ಸಚಿವ ದಿನೇಶ್ ಗುಂಡೂರಾವ್ ವಾಗ್ದಾಳಿ ನಡೆಸಿದರು.

ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 2023ರಲ್ಲಿ ಕೇಂದ್ರ ಸರ್ಕಾರ ಈ ಕಾನೂನು ತರುತ್ತೇವೆ ಎಂದಾಗ ಇಂದಿನಿಂದಲೇ ಜಾರಿಗೆ ತನ್ನಿ ಎಂದು ಕಾಂಗ್ರೆಸ್ ಸರ್ವಾನುಮತದಿಂದ ಅನುಮೋದನೆ ನೀಡಿತ್ತು. ಆದರೆ ಮಹಿಳಾ ಮೀಸಲಾತಿ ಮಾಡುವುದಕ್ಕೂ ಡಿಲಿಮಿಟೇಷನ್ ಮಾಡುವುದಕ್ಕೂ ಸಂಬಂಧವೇ ಇಲ್ಲ. ಮಹಿಳೆಯರಿಗೆ ನೇರವಾಗಿ 33% ಮೀಸಲಾತಿ ನೀಡುವ ತೀರ್ಮಾನ ಮಾಡಿ ನಾವೆಲ್ಲರೂ ಸ್ವಾಗತಿಸುತ್ತೇವೆ. ಕರ್ನಾಟಕದಲ್ಲಿ 224 ವಿಧಾನಸಭಾ ಕ್ಷೇತ್ರಗಳಿದ್ದು, ಮಹಿಳಾ ಮೀಸಲಾತಿ 33% ಕೊಟ್ಟರೆ ಯಾವ ಸಮಸ್ಯೆಯೂ ಇಲ್ಲ ಎಂದು ಹೇಳಿದರು.

ಹಿಂದೆಯೇ ಈ ಕಾನೂನು ತಂದಿದ್ದಲ್ಲಿ ಈಗೇನು ಚುನಾವಣೆ ನಡೆಯುತ್ತಿರುವ 5 ರಾಜ್ಯಗಳಿಗೂ ಅದರ ಪ್ರಯೋಜನ ದೊರೆಯುತ್ತಿತ್ತು. ತಮ್ಮ ಅಧಿಕಾರ ಉಳಿಸಿಕೊಳ್ಳಲು ಬಿಜೆಪಿಯು ಮಹಿಳೆಯರ ಹೆಸರಿನಲ್ಲಿ ಕ್ಷೇತ್ರ ಪುನರ್ ವಿಂಗಡಣೆ ಮಾಡಬೇಕೆಂಬ ಹುನ್ನಾರ ನಡೆಸುತ್ತಿದೆ. ಅದರಲ್ಲೂ ಇದರಿಂದ ದಕ್ಷಿಣ ಭಾರತ ರಾಜ್ಯಗಳಿಗೆ ದೊಡ್ಡ ಸಮಸ್ಯೆಯಾಗುತ್ತದೆ ಎಂದು ನಮಗೆ ಆಘಾತವಿದೆ. ಅದರ ಬಗ್ಗೆ ನಮಗೆ ಅನೇಕ ಅನುಮಾನಗಳಿವೆ ಎಂದರು.

ಮಹಿಳೆಯರ ಹೆಸರಿನಲ್ಲಿ ತಾವು ಅಧಿಕಾರ ಇಟ್ಟುಕೊಳ್ಳಬೇಕೆಂಬ ಬಿಜೆಪಿಯ ಪ್ರಯತ್ನ ವಿಫಲವಾಗಿದೆ. ಈ ಮೂಲಕ ಮೋದಿಯವರ, ಬಿಜೆಪಿಯವರ ಸಂಚು ಬಹಿರಂಗಗೊಂಡು ಪಾರ್ಲಿಮೆಂಟ್‌ನಲ್ಲಿ ಅವರು ಉತ್ತರಿಸಲಾಗದೆ ಮಹಿಳಾ ಮೀಸಲಾತಿ ಬಿಲ್ ಪಾಸ್ ಮಾಡಲಾಗದೆ ತೀವ್ರ ಮುಖಭಂಗ ಅನುಭವಿಸಿದ್ದಾರೆ ಎಂದು ಟೀಕಿಸಿದರು.

ಮಹಿಳಾ ಮೀಸಲಾತಿ ಬಿಲ್ ಪಾಸ್ ಮಾಡಲು ತರಾತುರಿಯಲ್ಲಿ ಸಭೆ ಕರೆಯಬೇಕಿತ್ತೇ?, ಚುನಾವಣೆ ಮಧ್ಯೆ ಈ ಸಭೆ ಬೇಡವೆಂದು ನಾವು ಮೊದಲೇ ಹೇಳಿದ್ದೆವು. ಸರಿಯಾಗಿ ಇದನ್ನು ವಿಮರ್ಶಿಸಿ, ಇದು ಬಿಜೆಪಿಯವರ ದೊಡ್ಡ ಷಡ್ಯಂತರ ಎಂದು ಮಾಧ್ಯಮ ಹೆಡ್‌ಲೈನ್ ಹಾಕಬೇಕೇ ಹೊರತು ಮಹಿಳಾ ಮೀಸಲಾತಿ ಮಸೂದೆ ಸೋಲು ಕಂಡಿತು ಎಂದು ಬರೆಯಬಾರದು. ಬಿಜೆಪಿಯ ಸಂಚು, ಹುನ್ನಾರ, ಸೋಲು ಕಂಡಿತು ಎಂದು ಬರೆಯಬೇಕು ಎಂದು ಕಿಡಿಕಾರಿದರು.

ಪುನರ್‌ವಿಂಗಡನೆಯಿಂದ ಜನಪ್ರತಿನಿಧಿಗಳಿಗೆ ಜನಸಂಪರ್ಕ ಸುಲಭ - ಸವದಿ: ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ಮಸೂದೆಯ ಕುರಿತು ಅಥಣಿ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಇತ್ತೀಚಿಗೆ ಪ್ರತಿಕ್ರಿಯಿಸಿ, ಕ್ಷೇತ್ರಗಳ ಪುನರ್‌ವಿಂಗಡನೆಯಿಂದ ಜನಪ್ರತಿನಿಧಿಗಳಿಗೆ ಜನಸಂಪರ್ಕ ಸುಲಭವಾಗಲಿದ್ದು, ಅಭಿವೃದ್ಧಿ ದೃಷ್ಟಿಯಿಂದ ಪೂರಕವಾದ ನಿರ್ಧಾರ ಎಂದು ಹೇಳಿದ್ದರು.

ಪ್ರಸ್ತುತ ಲೋಕಸಭಾ ಕ್ಷೇತ್ರಗಳು ಭೌಗೋಳಿಕವಾಗಿ ಅತ್ಯಂತ ದೊಡ್ಡದಾಗಿವೆ. ಇದರಿಂದ ಮತದಾರರನ್ನು ತಲುಪುವುದು ಜನಪ್ರತಿನಿಧಿಗಳಿಗೆ ಸವಾಲಿನ ಕೆಲಸವಾಗಿದೆ. ಹೊಸ ನಿಯಮದಂತೆ ಒಂದು ವಿಧಾನಸಭಾ ಕ್ಷೇತ್ರಕ್ಕೆ ಸುಮಾರು 2 ಲಕ್ಷ ಮತದಾರರು ಹಾಗೂ ಒಂದು ಲೋಕಸಭಾ ಕ್ಷೇತ್ರಕ್ಕೆ 8 ವಿಧಾನಸಭಾ ಕ್ಷೇತ್ರಗಳಂತೆ ಒಟ್ಟು 16 ಲಕ್ಷ ಮತದಾರರಿಗೆ ಸೀಮಿತಗೊಳಿಸುವ ಚಿಂತನೆ ನಡೆದಿದೆ. ಇದು ಜಾರಿಯಾದಲ್ಲಿ ಜನಸಂಪರ್ಕಕ್ಕೆ ಹೆಚ್ಚು ಅನುಕೂಲವಾಗುತ್ತದೆ ಎಂದು ತಿಳಿಸಿದ್ದರು.

## ರಾಯಚೂರಿನಲ್ಲಿ 44.2 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲು

ತಾಪಮಾನ ದಾಖಲಾಗುತ್ತಿದ್ದರೂ, ಶನಿವಾರ ಅದು ಮತ್ತಷ್ಟು ಏರಿಕೆಯಾಗಿದ್ದು, ಇದರಿಂದಾಗಿ ಜನರು ತತ್ತರಿಸುವಂತಾಗಿದೆ.

ಬಿಸಿಲಿನ ತೀವ್ರತೆಯನ್ನು ತಾಳಲಾರದೆ ಜನರು ತಂಪು ಪಾನೀಯಗಳು, ನೀರಿನ ಮೋರೆ ಹೋಗಿದ್ದಾರೆ. ಅಗತ್ಯವಿಲ್ಲದೆ ಮನೆಯಿಂದ ಹೊರಬರುವುದಕ್ಕೂ ಹಿಂಜರಿಯುತ್ತಿದ್ದು, ಮಧ್ಯಾಹ್ನದ ವೇಳೆಯಲ್ಲಿ ಕೆಲವು ರಸ್ತೆಗಳು ನಿರ್ಜನವಾಗಿರುವ ದೃಶ್ಯ ಕಂಡುಬರುತ್ತಿದೆ. ಬಿಸಿಲಿನ ಝಳದಿಂದಾಗಿ ರಸ್ತೆಗಳೂ ಕೂಡ ಕೆಂಡದಂತಾಗಿವೆ. ಬಿಸಿ ಗಾಳಿ ಜನರ ನೀರಿನ ದಾಹ ಹೆಚ್ಚಿಸಿದ್ರೆ, ಮತ್ತೊಂದು ಕಡೆ ಬಿಸಿಲಿನ ಝಳಕ್ಕೆ ಜನರು ತತ್ತರಿಸುವಂತೆ ಆಗಿದೆ.

ಇನ್ನೊಂದೆಡೆ ದೇವಸೂಗೂರು ಸಮೀಪದಲ್ಲೇ ಇರುವ ಬೃಹತ್ ರಾಯಚೂರು ಥರ್ಮಲ್ ಪವರ್ ಸ್ಟೇಷನ್ (ಆರ್‌ಟಿಪಿಎಸ್) ಪ್ರದೇಶದಲ್ಲೂ ಉಷ್ಣಾಂಶ ಹೆಚ್ಚಳ ಕಂಡುಬಂದಿದ್ದು, ಪರಿಸರದ ಮೇಲೂ ಪರಿಣಾಮ ಬೀರುವ ಸಾಧ್ಯತೆಗಳಿವೆ. ಬಿಸಿಲಿನ ತೀವ್ರತೆ ಮುಂದುವರಿಯುವ ಸಾಧ್ಯತೆ ಇರುವ ಹಿನ್ನೆಲೆ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಪತ್ರಿಕಾ ಪ್ರಕಟಣೆಗಳನ್ನು ಹೊರಡಿಸುವ ಮೂಲಕ ಮುನ್ಸೂಚನೆ ನೀಡುತ್ತಿದೆ.

ಉಷ್ಣ ಅಲೆಯ ಎಚ್ಚರಿಕೆ ನೀಡಿದ್ದ ಹವಾಮಾನ ಇಲಾಖೆ : ಭಾರತೀಯ ಹವಾಮಾನ ಇಲಾಖೆ -ಐಎಂಡಿ ಇತ್ತೀಚಿಗೆ 2026ರ ಎಪ್ರಿಲ್ ಮಧ್ಯಭಾಗದಿಂದ ಮಧ್ಯ ಮತ್ತು ಪೂರ್ವ ಭಾರತದ ಪ್ರತ್ಯೇಕ ಪ್ರದೇಶಗಳಿಗೆ ಅಧಿಕೃತ ಉಷ್ಣ ಅಲೆಗಳ ಎಚ್ಚರಿಕೆಗಳನ್ನು ನೀಡಿತ್ತು.

ಈ ಋತುವಿನಲ್ಲಿ ದೆಹಲಿ - ಎನ್‌ಸಿಆರ್ ಮೊದಲ ಬಾರಿಗೆ 40 ಡಿಗ್ರಿ ಸೆಲ್ಸಿಯಸ್ ತಾಪಮಾನದ ಗಡಿಯನ್ನು ದಾಟುವ ನಿರೀಕ್ಷೆಯಿದೆ. ಆದರೆ, ಉತ್ತರ ಪ್ರದೇಶ ಮತ್ತು ರಾಜಸ್ಥಾನದ ಕೆಲವು ಭಾಗಗಳು 42 ರಿಂದ 43 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶಕ್ಕೆ ಮುಟ್ಟಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿತ್ತು.

## 21 ರಂದು ಭಾವಚಿತ್ರ ಮೆರವಣಿಗೆ ಶರಣಭೂಪಾಲ ನಾಡಗೌಡ

ಉಪನ್ಯಾಸ ನಡೆಯಲಿದೆ.

ಏ.21 ರಂದು ಸಂಜೆ 5 ಗಂಟೆಗೆ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಭಾವಚಿತ್ರ ಮೆವರಣಿಗೆ ನಡೆಯಲಿದೆ. ಪಟೇಲ್ ವೃತ್ತ, ಸರಾಫ್ ಬಜಾರ, ಕಿರಾಣಿ ಬಜಾರ, ಬಟ್ಟೆಬಜಾರ, ಮಹಾವೀರ ಚೌಕ್, ಲೋಹರವಾಡಿ ಗಾಂಧಿ ಚೌಕ ಮೂಲಕ ಶ್ರೀವೀರಶೈವ ಕಲ್ಯಾಣ ಮಂಟಪಕ್ಕೆ ಆಗಮಿಸಿ ಮುಕ್ತಾಯಗೊಳ್ಳಲಿದೆ.

ಜಯಂತಿ, ಮರವಣಿಗೆ ಕಾರ್ಯಕ್ರಮದಲ್ಲಿ ಎಲ್ಲಾ ಸಮುದಾಯ ಜನರು ಭಾಗವಹಿಸುವಂತೆ ಮನವಿ ಮಾಡಿದರು.

ಈ ಸಂದರ್ಬದಲ್ಲಿ ವೀರಶೈವ ಮಹಾಸಬಾ ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಮಿರ್ಜಾಪುರು,

ಕೆ.ಎಂ.ಪಾಟೀಲ್, ಚುಕ್ಕಿ ಶಿವಾನಂದ, ವಿರುಪನಗೌಡ ಬಂಡಿ, ಗೌರಿಶಂಕರ ವಕೀಲ ಉಪಸ್ಥಿತರಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L